MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 ಸಂಚಿಕೆ: 254 ಬುಧವಾರ : 23-07-2025 ರಾಯಚೂರು RNI NO: KARKAN/2022/90446 ಪುಟ: 4 ಬೆಲೆ: ರೂ: 2-00

VOLUME: 04 ISSUE: 254 WEDNESDAY : 23-07-2025 RAICHUR EMAIL: YUVAMARGA@GMAIL.COM PAGE: 4 PRICE: Rs: 2-00

## ವಿಷ ಆಹಾರ ಸೇವಿಸಿ ಒಂದೇ ಕುಟುಂಬದ ಮೂವರ ಸಾವು

ಯುವ ಮಾರ್ಗ ಸುದ್ದಿ

**ರಾಯಚೂರು,ಜು.22–** ಕಳೆದ ರಾತ್ರಿ ಊಟ ಸೇವಿಸಿದ ಬಳಿಕ ಹೊಟ್ಟೆನೋವು ಕಾಣಿಸಿಕೊಂಡು ಒಂದೇ ಕುಟುಂಬದ ಮೂವರು ಮೃತಪಟ್ಟ ಘಟನೆ ರಾಯ ಚೂರು ಜಿಲ್ಲೆ ಸಿರವಾರ ತಾಲೂಕಿನ ಕೆ.ತಿಮಾಪುರ ಗ್ರಾಮದಲ್ಲಿ ನಡೆದಿದೆ.

ಕಳೆದ ರಾತ್ರಿ ಅವಿಭಕ್ತ ಕುಟುಂಬ ಸದಸ್ಯರು ಊಟ ಮಾಡಿ ಮಲಗಿದ್ದಾರೆ. ಮುಂಜಾನೆ 2 ಗಂಟೆ ಸಂದರ್ಭದಲ್ಲಿ ಒಬ್ಬರ ನಂತರ ಒಬ್ಬರಿಗೆ ಹೊಟ್ಟೆ ನೋವು ಕಾಣಿಸಿಕೊಂಡಿದೆ.ನಂತರ ಎಲ್ಲರು ಸ್ಥಳೀಯ ಆಸ್ಪತ್ರೆಗೆ ತೆರಳಿದಾಗ ಚಿಕಿತ್ಸೆ ವೇಳೆ ಮುಂಜಾನೆ 5ರ ವೇಳೆಗೆ ಮನೆಯ ಯಜಮಾನ ರಮೇಶ್ (35) ಮತ್ತು ಅವರ ಪುತ್ರಿ



ನಾಗಮ(8) ಮೃತಪಟ್ಟಿದ್ದಾರೆ. ತೀವ್ರ ಅಸ್ವಸ್ಥಗೊಂಡಿದ್ದ ಮತ್ತೊಬ್ಬಳು ಪುತ್ರಿ ದೀಪಾ(6) ಎಂಬ ಬಾಲಕಿಯನ್ನು ರಿಮ್ಸ್ ಆಸ್ಪತ್ರೆಗೆ ಕರೆದೊಯ್ಯುವಾಗ ಮಾರ್ಗ ಮಧ್ಯೆ ಮೃತಪಟ್ಟಿದ್ದಾಳೆ ಸದ್ಯ ರಮೇಶ್ ಅವರ ಪತ್ನಿ ಪದಾ ಅವರನ್ನು ರಿಮ್ಸ್‌ಗೆ ಮತ್ತಿಬ್ಬರು ಮಕ್ಕಳಾದ ಕೃಷ್ಣ, ಚೈತ್ರಾಗೆ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರೆದಿದೆ. ಕುಟುಂಬದವರೆಲ್ಲ ರಾತ್ರಿ ಚವಳಿಕಾಯಿ ಪಲ್ಯ, ರೊಟ್ಟಿ, ಅನ್ನ, ಸಾಂಬಾರ್ ಸೇವನೆ ಮಾಡಿದ್ದರು. ಊಟ ಮಾಡಿ ಮಲಗಿದ್ದ 6 ಜನರಿಗೆ ಹೊಟ್ಟೆ ನೋವು ಕಾಣಿಸಿಕೊಂಡಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.ಸದ್ಯ ಈ ಘಟನೆ ಗ್ರಾಮದಲ್ಲಿ ಆತಂಕಕ್ಕೆ ಕಾರಣವಾಗಿದೆ. ಕವಿತಾಳ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.ಆರೋಗ್ಯ ಇಲಾಖೆ ಸಿಬ್ಬಂದಿ ಕೂಡ ಆಗಮಿಸಿ ಆಹಾರದ ಸ್ಯಾಂಪಲ್ ಪಡೆದು ಪ್ರಯೋಗಾಲಕ್ಕೆ ಕಳಿಸಿದ್ದಾರೆ. ಘಟನೆ ಕುರಿತು ತನಿಖೆ ನಡೆಯುತ್ತಿದ್ದು ,ರಮೇಶ್ ಅವರು ತಮ ಪತ್ನಿ ಪದಾ ಹಾಗು ಇಬ್ಬರು ಗಂಡು ಮತ್ತು ಇಬ್ಬರು ಹೆಣ್ಣು ಮಕ್ಕಳ ಜೊತೆ ವಾಸವಾಗಿದ್ದರು.

## ಜಿಲ್ಲಾ ಪೊಲೀಸ್ ಇಲಾಖೆಯಿಂದ ಮನೆಮನೆಗೆ ಪೊಲಿಸ್ ಕಾರ್ಯಕ್ರಮಕ್ಕೆ ಚಾಲನೆ




ಯುವ ಮಾರ್ಗ ಸುದ್ದಿ

**ರಾಯಚೂರು,ಜು.22–**ಪೊಲೀಸ್ ವ್ಯವಸ್ಥೆಯನ್ನು ಸಾರ್ವಜನಿಕ ಸ್ನೇಹಿಯನ್ನಾಗಿಸುವ ದಿಸೆಯಲ್ಲಿ ಮನೆ ಮನೆಗೆ ಪೊಲೀಸರು ಎಂಬ ವಿನೂತನ ಪರಿಕಲ್ಪನೆಯ ಮಹತ್ವದ ಕಾರ್ಯಕ್ರಮಕ್ಕೆ ರಾಯಚೂರ ಜಿಲ್ಲಾ ಪೊಲೀಸ್ ಇಲಾಖೆಯಿಂದ ಮಂಗಳವಾರ ಚಾಲನೆ ಸಿಕ್ಕಿತು.

ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರ್ ಸ್ವಾಮಿ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ವೇಳೆ ಅವರು ಮಾತನಾಡಿ, ಪೊಲೀಸರನ್ನು ಸಮಾಜದ ಭದ್ರತಾ ಪ್ರತಿನಿಧಿಗಳೆಂದು, ನಾಗರೀಕರ ಮೂಲಭೂತ ಹಕ್ಕುಗಳ ರಕ್ಷಕರೆಂದು ಸಂಬೋಧಿಸಲಾಗುತ್ತದೆ. ಸಮಾಜದ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡುವುದು, ಅಪರಾಧಗಳ ತಡೆ ಹಾಗೂ ಪತ್ತೆ, ಸಮಾಜದಲ್ಲಿ ನಿರ್ಭಯ ವಾತಾವರಣವನ್ನು ಸೃಜಿಸುವ ಜೊತೆಗೆ ರಕ್ಷಣೆ ಮತ್ತು ಸುರಕ್ಷತೆ ಒದಗಿಸುವ ಕರ್ತವ್ಯ ಮತ್ತು ಗುರುತರ ಜವಾಬ್ದಾರಿಗಳು ಪೊಲೀಸ್ ಇಲಾಖೆಯ ಮೇಲಿವೆ ಎಂದರು.

ಪೊಲೀಸ್ ವ್ಯವಸ್ಥೆಯು ಸಮಾಜ ಸ್ನೇಹಿಯಾಗಿಸಿಕೊಳ್ಳುವುದರಿಂದ ಪೊಲೀಸ್ ಮೂಲಭೂತ ಕರ್ತವ್ಯದ ಪರಿಣಾಮಕತೆಯನ್ನು ಹೆಚ್ಚಿಸಿಕೊಳ್ಳಬಹುದಾಗಿದೆ. ಪೊಲೀಸ್ ಸೇವೆಗಳ ಪ್ರತಿಯೊಂದು ಸ್ಥರದಲ್ಲೂ, ಸಾರ್ವಜನಿಕರ ಬೆಂಬಲ ವತ್ತು ಸಹಭಾಗಿತ್ವವನ್ನು ಸಾಧಿಸಿ**(2ನೇಪುಟಕ್ಕೆ)**

## ರಸಗೊಬ್ಬರ ಅಕ್ರಮ ಮಾರಾಟ ರೈತರಿಗೆ ದರ ಹೆಚ್ಚಳ, ದಾಸ್ತಾನು ಮರೆಮಾಚಿದ ಆರೋಪ

ಯುವ ಮಾರ್ಗ ಸುದ್ದಿ

**ಮಾನ್ವಿ,ಜು.22–**ಮಾನ್ವಿ ಮತ್ತು ಸಿರವಾರ ತಾಲೂಕುಗಳಲ್ಲಿ ರಸಗೊಬ್ಬರ ಅಂಗಡಿ ಮಾಲೀಕರು ದಾಸ್ತಾನು ಇದ್ದರೂ ಸಹ ರೈತರಿಗೆ "ದಾಸ್ತಾನು ಇಲ್ಲ" ಎಂದು ಹೇಳಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದಾರೆ ಎಂದು ಕರ್ನಾಟಕ ದಲಿತ ರಕ್ಷಣಾ ವೇದಿಕೆ(ರಿ) ಜಿಲ್ಲಾ ಸಮಿತಿ ತಾಲೂಕ ಸಹಾಯಕ ಕೃಷಿ ನಿರ್ದೇಶಕರಿಗೆ ಮನವಿ ಸಲ್ಲಿಸಿ ಆರೋಪಿಸಿದ್ದಾರೆ.

ಕಳೆದ 7-8 ದಿನಗಳಿಂದ ಈ ಪ್ರದೇಶದಲ್ಲಿ ಉತ್ತಮ ಮಳೆಯಾಗುತ್ತಿದ್ದು, ಹತ್ತಿ, ಸೂರ್ಯಕಾಂತಿ, ಮೆಣಸಿನ ಗಿಡ ಸೇರಿದಂತೆ ವಿವಿಧ ಬೆಳೆಗಳಿಗೆ ಗೊಬ್ಬರ ಹಾಕುವುದು ಅತ್ಯಗತ್ಯವಾಗಿದೆ ಆದರೆ, ರಸಗೊಬ್ಬರ ಅಂಗಡಿ ಮಾಲೀಕರು ಈ ಪರಿಸ್ಥಿತಿಯ ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ ಎಂದು ರೈತರು ಆರೋಪಿಸಿದ್ದಾರೆ.

ಅಂಗಡಿ ಮಾಲೀಕರು ತಮ್ಮ ಅಂಗಡಿಗಳು ಮತ್ತು ಗೋದಾಮುಗಳಲ್ಲಿ



ರಸಗೊಬ್ಬರ ಸಂಗ್ರಹಿಸಿದ್ದರೂ, ರೈತರು ಕೇಳಿದಾಗ "ಗೊಬ್ಬರ ಇಲ್ಲ" ಎಂದು ಹೇಳಿ ಕಳುಹಿಸುತ್ತಿದ್ದಾರೆ ಇದರಿಂದ ರೈತರು ದಿನವಿಡೀ ಗೊಬ್ಬರಕ್ಕಾಗಿ ಅಲೆದಾಡುವಂತಾಗಿದೆ. ಅಲ್ಲದೆ, ಕೆಲವು ಅಂಗಡಿ ಮಾಲೀಕರು ಡಿಎಪಿ ಕೊಟ್ಟರೆ ಯೂರಿಯಾ ಗೊಬ್ಬರ ನೀಡಲು ನಿರಾಕರಿಸುತ್ತಿದ್ದಾರೆ, ಅಥವಾ ಯೂರಿಯಾ ತೆಗೆದುಕೊಂಡರೆ ಡಿಎಪಿ/17-17 ಗೊಬ್ಬರ ನೀಡುವುದಿಲ್ಲ ಇನ್ನೂ ಕೆಲವರು ಡಿಎಪಿ ಜೊತೆಗೆ ಜಿಂಕ್ ಸಹ ಕಡ್ಡಾಯವಾಗಿ ಖರೀದಿಸುವಂತೆ ಒತ್ತಾಯಿಸುತ್ತಿದ್ದಾರೆ "ಸಂಬಂಧಪಟ್ಟ ಅಧಿಕಾರಿಗಳು ಹೇಳಿದ್ದಾರೆ" ಎಂದು ಸುಳ್ಳು ಹೇಳಿ, ರೈತರಿಗೆ ಅಗತ್ಯವಿಲ್ಲದಿದ್ದರೂ, ಮತ್ತು ಆರ್ಥಿಕ ಸಂಕಷ್ಟದಲ್ಲಿದ್ದರೂ ಜಿಂಕ್ ಖರೀದಿಸಲು ಒತ್ತಡ ಹೇರಲಾಗುತ್ತಿದೆ. ರಸಗೊಬ್ಬರವನ್ನು ಮಾರುಕಟ್ಟೆ ದರಕ್ಕಿಂತ ಪ್ರತಿ ಚೀಲಕ್ಕೆ 300 ರೂ ಹೆಚ್ಚು ದರದಲ್ಲಿ ಮಾರಾಟ **(2ನೇಪುಟಕ್ಕೆ)**

## ವ್ಯಸನ ಮುಕ್ತ ದಿನಾಚರಣೆಯು ಅರ್ಥಪೂರ್ಣವಾಗಿ ನಡೆಯಲಿ: ಅಪರ ಜಿಲ್ಲಾಧಿಕಾರಿ ಶಿವಾನಂದ

ಯುವ ಮಾರ್ಗ ಸುದ್ದಿ

**ರಾಯಚೂರು,ಜು.22–** ಚಿತ್ತರಗಿ ಇಳಕಲ್ಲಿನ ಶ್ರೀವಿಜಯ ಮಹಾಂತೇಶ್ವರ ಸಂಸ್ಥಾನದ ಪೂಜ್ಯ ಶ್ರೀ ಡಾ.ಮಹಾಂತ ಶಿವಯೋಗಿ ಸ್ವಾಮೀಜಿ ಅವರ ಜನ್ಮ ದಿನದ ಅಂಗವಾಗಿ ಆಗಸ್ಟ್ 1ರಂದು ಆಚರಿಸಲ್ಪಡುವ ವ್ಯಸನ ಮುಕ್ತ ದಿನಾಚರಣೆಯ ಕಾರ್ಯಕ್ರಮವನ್ನು ಜಿಲ್ಲಾ ಹಾಗೂ ತಾಲೂಕು ಕೇಂದ್ರಗಳಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸೂಚನೆ ನೀಡಿದರು.

ನೂತನ ಜಿಲ್ಲಾಧಿಕಾರಿಗಳ ಆವರಣದಲ್ಲಿನ ತಮ್ಮ ಕಚೇರಿಯಲ್ಲಿ ನಡೆದ ವ್ಯಸನ ಮುಕ್ತ ದಿನಾಚರಣೆಯ ಪೂರ್ವ ಭಾವಿ ಸಿದ್ಧತಾ ಸಭೆಯಲ್ಲಿ ಅವರು ಮಾತನಾಡಿದರು.

ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆಯ ವ್ಯಸನಮುಕ್ತ ದಿನಾಚರಣೆಯ ಜಿಲ್ಲಾ ಕೇಂದ್ರದ ಕಾರ್ಯಕ್ರಮವನ್ನು ವಾರ್ತಾ ಮತ್ತು ಸಾರ್ವಜನಿಕ




ಸಂಪರ್ಕ ಇಲಾಖೆಯ ಅಧಿಕಾರಿಗಳು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ಇನ್ನಿತರ ಇಲಾಖೆಗಳು ಮತ್ತು ಜಿಲ್ಲೆಯ ವಿವಿಧ ಸಂಘ-ಸಂಸ್ಥೆಗಳ ಸಹಯೋಗದೊಂದಿಗೆ ಆಯೋಜನೆ ಮಾಡಬೇಕು. ವಿದ್ಯಾರ್ಥಿ ಯುವಜನರಿಗೆ ವಿಶೇಷ ಸಂದೇಶ ಹೋಗುವ ರೀತಿಯಲ್ಲಿ ಅರ್ಥಪೂರ್ಣವಾಗಿ ದಿನಾಚರಣೆ ನಡೆಸಲು ಈಗಿನಿಂದಲೇ ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಮದ್ಯ ಮತ್ತು ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜನರಲ್ಲಿ ಮತ್ತು ಶಾಲಾ ಕಾಲೇಜು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಆಗಸ್ಟ್ 1ರಂದು ವ್ಯಸನಮುಕ್ತ ದಿನಾಚರಣೆಯನ್ನು ಜಿಲ್ಲೆಯಾದ್ಯಂತ ಎಲ್ಲ ಶಾಲಾ-ಕಾಲೇಜುಗಳಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಆಯಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮತ್ತು ಸಂಬಂಧಿಸಿದ ಅಧಿಕಾರಿಗಳಿಗೆ ಪತ್ರ ಬರೆದು **(2ನೇಪುಟಕ್ಕೆ)**

## ಎಲ್ಲ ಸಮಸ್ಯೆಗಳಿಗೂ ಶಿಕ್ಷಣವೊಂದೇ ಪರಿಹಾರ: ನ್ಯಾ.ಹೆಚ್.ಎ.ಸಾತ್ವಿಕ್



ಯುವ ಮಾರ್ಗ ಸುದ್ದಿ

**ರಾಯಚೂರು,ಜು.22–**ಜೀವನದಲ್ಲಿ ಸಾಮಾನ್ಯವಾಗಿ ಪ್ರತಿಯೊಬ್ಬರು ಎದುರಿಸುವ ಎಲ್ಲ ಸಮಸ್ಯೆಗಳಿಗೂ ಉತ್ತಮ ಶಿಕ್ಷಣವೊಂದೇ ಪರಿಹಾರ ಆಗಬಲ್ಲದು ಎಂದು ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ಹೇಳಿದರು.

ನಗರದ ಸರ್ಕಾರಿ ಪರಿವೀಕ್ಷಣಾಲಯದ ಸಭಾಂಗಣದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಎಸ್.ಎಸ್.ಎಲ್.ಸಿ ಪಾಸಾದ ಬಾಲ ಮಂದಿರದ ಮಕ್ಕಳಿಗೆ ಇತ್ತೀಚೆಗೆ ಹಮ್ಮಿಕೊಂಡಿದ್ದ ಅಭಿನಂದನಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ವ್ಯಕ್ತಿಯ ಯಾವುದೇ ತರಹದ ಸಮಸ್ಯೆಗಳಿಗೆ ಉತ್ತಮ ಶಿಕ್ಷಣ ಮಾತ್ರ ಪರಿಹಾರ ನೀಡಬಲ್ಲದು. ಆದ್ದರಿಂದ ಮಕ್ಕಳು ಉತ್ತಮವಾಗಿ ಅಭ್ಯಾಸ ಮಾಡಬೇಕು. ವಿದ್ಯಾರ್ಥಿ ಜೀವನದಲ್ಲಿ ಸಮಯಕ್ಕೆ ಹೆಚ್ಚಿನ ಮಹತ್ವ ನೀಡಬೇಕು ಎಂದು ಸಲಹೆ ನೀಡಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಪೊಲೀಸ್ ಇಲಾಖೆಯ ಉಪ ಅಧೀಕ್ಷಕರಾದ ಶಾಂತವೀರ ಅವರು ಮಾತನಾಡಿ, ಪ್ರತಿಯೊಬ್ಬರಲ್ಲೂ **(2ನೇಪುಟಕ್ಕೆ)**

## ಸ್ಕೌಟ್ ಗೈಡ್ ವಿದ್ಯಾರ್ಥಿಗಳಿಗೆ ದ್ವಿತೀಯ ಸೋಪಾನ ಪರೀಕ್ಷೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಜು.22–** ನಗರದ ಸ್ಕೌಟ್ ಗೈಡ್ ಕಬ್ ಮತ್ತು ಬುಲ್ ಬುಲ್ ಘಟಕಗಳು ಇರುವ ಶಾಲೆಗಳಲ್ಲಿ ವಿದ್ಯಾರ್ಥಿಗಳು ರಾಜ್ಯಪಾಲರ ಪ್ರಶಸ್ತಿ ಪಡೆಯಲು ಅರ್ಹತೆ ಪಡೆಯಲು ಅನುಕೂಲವಾಗುವಂತೆ ಸ್ಥಳೀಯ ಸಂಸ್ಥೆಯ ಹಂತದಲ್ಲಿ ಶಾಲೆಗಳಲ್ಲಿ ದ್ವಿತೀಯ ಸೋಪಾನ ಪರೀಕ್ಷೆಯನ್ನು ಮೌಖಿಕವಾಗಿ ಹಾಗೂ ಪ್ರಾಯೋಗಿಕವಾಗಿ ಆಯೋಜಿಸಲಾಗಿತ್ತು.

ಮಕ್ಕಳು ತಾವು ಕಲಿತ ವಿಷಯಗಳನ್ನು ಪರೀಕ್ಷಕರ ಮುಂದೆ ಸಾದರ್ರಪಡಿಸಿ ಮುಂದಿನ ಪರೀಕ್ಷೆಗೆ ತಯಾರಾದರು. ಪರಿಕ್ಷಕರು ವಿವಿಧ ವಿಷಯಗಳ ಕುರಿತು ಮಕ್ಕಳನ್ನು ಪರೀಕ್ಷಿಸಿದರು. ಪ್ರಾರ್ಥನೆ ಗೀತೆ, ಧ್ವಜ ಗೀತೆ, ರಾಷ್ಟ್ರಗೀತೆ, ಪರೀಕ್ಷೆಗಳನ್ನು ನಿರ್ವಹಿಸಿದ. ಕಾಕತೀಯ ಶಾಲೆಯ ಕಬ್ ಮಾಸ್ಟರ್ ಚಂದ್ರಶೇಖರ್, ಫ್ಲೋಕ್ ಲೀಡರ್ ವಸುಂದರ, ಸ್ಕೌಟ್ ಮಾಸ್ಟರ್ ಶಿವರಾಜಪ್ಪ, ವೆಂಕಟೇಶ್ , ಗೈಡ್ ನಾಯಕರಾದ ಪರಿಮಳ, ರಾಜ್ಯ ಪ್ರತಿನಿಧಿ ಗೈಡ್ ರಜನಿ ಸೇರಿದಂತೆ ಇನ್ನಿತರ ದಳನಾಯಕ ನಾಯಕಿಯರು, ಮಕ್ಕಳು, ಶಾಲಾ ಆಡಳಿತ ಮಂಡಳಿ, ಮುಖ್ಯ ಗುರುಗಳು ಈ ಪರೀಕ್ಷೆ ಶಿಬಿರದಲ್ಲಿ ಹಾಜರಾಗಿದ್ದರು. ಕಾಕತಿಯ ಶಾಲಾ ಆವರಣದಲ್ಲಿ ಈ ಪರೀಕ್ಷೆ ನಡೆಯಿತು. ಸ್ಥಳೀಯ ಸಂಸ್ಥೆಯ ಪದಾಧಿಕಾರಿಗಳು ಕೂಡ ಈ ಪರೀಕ್ಷೆಯ ಆಯೋಜನೆಯಲ್ಲಿ ತೊಡಗಿಸಿಕೊಂಡಿದ್ದರು.

## ಸಮರ್ಪಕವಾಗಿ ಸಿಗದ ಗೊಬ್ಬರ ರೈತರ ಪರದಾಟ




ಯುವ ಮಾರ್ಗ ಸುದ್ದಿ

**ಅರಕೇರಾ,ಜು.22–** ತಾಲ್ಲೂಕಿನಲ್ಲಿ ರೈತರಿಗೆ ಸಂಮರ್ಪಕವಾಗಿ ಯೂರಿಯಾ ಗೊಬ್ಬರ ದೊರೆಯುತ್ತಿಲ್ಲ ಹಾಗೂ ಸರ್ಕಾರದ ದರಕ್ಕಿಂತ ಹೆಚ್ಚಿನ ದರದಲ್ಲಿ ಗೊಬ್ಬರ ಮಾರಾಟ ಮಾಡುತ್ತಿದ್ದಾರೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ತಾಲ್ಲೂಕು ಅಧ್ಯಕ್ಷ ಹನುಮೇಶ ನಾಯಕ ಸರಗಿನ ಆರೋಪಿಸಿದರು.

ಪಟ್ಟಣದ ನಮ್ಮ ಗ್ರೋಮರ್ ಕೇಂದ್ರದ ಎದುರು ರೈತರೊಂದಿಗೆ ಪ್ರತಿಭಟನೆ ಮಾಡಿ ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು,ರೈತರಿಗೆ ಸರಿಯಾಗಿ ಗೊಬ್ಬರ ದೊರೆಯುತ್ತಿಲ್ಲ. ತಾಲ್ಲೂಕಿನಲ್ಲಿ ಸೊಸೈಟಿ ಹಾಗೂ ಖಾಸಗಿ ರಸಗೊಬ್ಬರ ಮಾರಾಟ ಅಂಗಡಿಯವರು ನಿಗದಿತ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿದ್ದಾರೆ ಎಂದು ದೂರಿದರು. ಕೆಲ ಅಂಗಡಿಗಳಲ್ಲಿ ಗೊಬ್ಬರದ ದರಪಟ್ಟಿ ಹಾಕಿದ್ದರು ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿದ್ದಾರೆ. ಅಲ್ಲದೆ ಅಗತ್ಯವಿರುವ ಡಿಎಪಿ ಗೊಬ್ಬರದ ಜತೆಗೆ ಬೆರೆ ಗೊಬ್ಬರವನ್ನು ಕಡ್ಡಾಯವಾಗಿ ಖರೀದ ಮಾಡಲೇಬೇಕು ಇಲ್ಲದಿದ್ದರೆ ಡಿಎಪಿ ಗೊಬ್ಬರ ಕೊಡುವುದಿಲ್ಲ ಎಂದು ಖಡಾಖಂಡಿತವಾಗಿ ರೈತರಿಗೆ ಹೇಳುತ್ತಿದ್ದಾರೆ ಎಂದು ತಿಳಿಸಿದರು. ರೈತರಿಗೆ ಸಮರ್ಪಕವಾಗಿ ಅಗತ್ಯವಾದ ಗೊಬ್ಬರ ನೀಡದಿದ್ದರೆ ಹಾಗೂ ಹೆಚ್ಚಿನ ದರಕ್ಕೆ ಮಾರಾಟ ಮಾಡಿದರೆ ಸಂಬಂಧಿಸಿದ ಕೃಷಿ ಇಲಾಖೆ ಎದುರು ಪ್ರತಿಭಟನೆ ಮಾಡುತ್ತೇವೆ ಎಂದು ಎಚ್ಚರಿಸಿದರು.

## ಮೊದಲನೇಯ ಪುಟದಿಂದ

# ಜಿಲ್ಲಾ ಪೊಲೀಸ್ ಇಲಾಖೆಯಿಂದ ಮನೆಮನೆಗೆ ಪೋಲಿಸ್ ಕಾರ್ಯಕ್ರಮಕ್ಕೆ ಚಾಲನೆ

ಕೊಳ್ಳುವುದರಿಂದ ಮಾತ್ರವೇ ಸಾರ್ವಜನಿಕರಿಗೆ ಉತ್ಕೃಷ್ಟ ಸೇವೆಯನ್ನು ಒದಗಿಸಲು ಸಾಧ್ಯ. ಪೊಲೀಸರು ಸಮಾಜದ ಸೇವಕರು ಎಂಬುದನ್ನು ಎಂದಿಗೂ ಮರೆಯಕೂಡದು. ಜನರಿಗೆ ಅತ್ಯುತ್ತಮ ಸೇವೆ ಒದಗಿಸುವುದೇ ನಮ್ಮ ಗುರಿ ಮತ್ತು ಮೂಲ ಧ್ಯೆಯ ಎಂಬುದನ್ನು ಸದಾ ನೆನಪಿನಲ್ಲಿಡಬೇಕು ಎಂದರು.

ಸಾರ್ವಜನಿಕ ಹಿತರಕ್ಷಣೆಗೆ ಪೊಲೀಸ್ ಇಲಾಖೆಯು ತುಂಬಾ ನಿಗಾವಹಿಸುತ್ತಿದೆ ಎಂದು ತಿಳಿಸಿದ ಅವರು, ಜನರು ಒಂದು ಮೊಬೈಲ್ ಫೋನ್ ಸಲುವಾಗಿ ಎಷ್ಟೆಲ್ಲಾ ಹಣ ಖರ್ಚು ಮಾಡುತ್ತಾರೆ. ಆದರೆ, ತಮ್ಮ ಹಿತರಕ್ಷಣೆ ಮಾಡುವ ಹೇಲ್ಮೆಟ್‌ಗೋಸ್ಕರ ಯಾಕೆ ಹಣವನ್ನು ಖರ್ಚು ಮಾಡುವುದಿಲ್ಲ ಎಂದು ನೆರದಿದ್ದ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಪ್ರಶ್ನಿಸಿ ಹೇಲ್ಮೇಟನ ಮಹತ್ವ ತಿಳಿಸಿದರು.ಪೊಲೀಸ್ ವ್ಯವಸ್ಥೆಯನ್ನು ಸಾರ್ವಜನಿಕ ಸ್ನೇಹಿಯಾಗಿಸಬೇಕು ಎನ್ನುವ ಉದ್ದೇಶದೊಂದಿಗೆ ಮನೆ-ಮನೆಗೆ ಪೊಲೀಸ್ ಪರಿಕಲ್ಪನೆಯಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯು ಕರ್ತವ್ಯ ನಿರ್ವಹಿಸುವುದು ಅವಶ್ಯಕತೆ ಇರುತ್ತದೆ ಎಂದು ಹೇಳಿದರು.ಪ್ರತಿಯೊಂದು ಮನೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಸಾರ್ವಜನಿಕರಿಗೆ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ ಪೊಲೀಸ್ ಅಧಿಕಾರಿಗಳ ದೂರವಾಣಿ ಸಂಖ್ಯೆ, ನಿಯಂತ್ರಣ ಕೋಣೆ-112 ಸಂಖ್ಯೆ ಹಿರಿಯ ಅಧಿಕಾರಿಗಳ ದೂರವಾಣಿ ಸಂಖ್ಯೆಗಳನ್ನು ಹಂಚಿಕೊಳ್ಳುವುದು ಹಾಗೂ ಎಂತಹದ್ದೇ ಪರಿಸ್ಥಿತಿಯಲ್ಲಿ ಪೊಲೀಸ್ ಇಲಾಖೆಗೆ ಕರೆ ಮಾಡುವಂತೆ ಉತ್ತೇಜಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.ಈ ವೇಳೆ ಅತಿಥಿಗಳಾಗಿ ರಾಯಚೂರು ಡಿವೈಎಸ್ಪಿ ಶಾಂತವೀರ ಅವರು ಮಾತನಾಡಿ, ಪೊಲೀಸ್ ಇಲಾಖೆಯು ಸಾರ್ವಜನಿಕರ ಹಿತಕ್ಕಾಗಿ ಹಲವಾರು ಎಚ್ಚರಿಕೆಯ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ಸಾರ್ವಜನಿಕರ ಹಿತ ರಕ್ಷಣೆಯಿಂದ ಸಾರ್ವಜನಿಕರು ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ಯಾವುದೇ ಘಟನೆಯ ಕುರಿತು ದೂರು ನೀಡಿದಲ್ಲಿ ಅವರ ಹೆಸರು ಮತ್ತು ಅವರ ವಿವರಗಳನ್ನು ಯಾರಿಗೂ ಹೇಳದಂತೆ ರಕ್ಷಣೆ ನೀಡುತ್ತೇವೆ. ಮತ್ತು ಅಂತಹ ವ್ಯಕ್ತಿಗಳಿಗೆ ಬಹುಮಾನಗಳನ್ನು ಸಹ ವಿತರಿಸಲಾಗುವುದು ಎಂದು ಹೇಳಿದರು.

**ವಿವಿಧ ಬಹುಮಾನಗಳು:** ವಿವಿಧ ಘಟನೆಗಳ ಕುರಿತು ಪೊಲೀಸ್ ಇಲಾಖೆಗೆ ಸಾರ್ವಜನಿಕರು ಮಾಹಿತಿ ನೀಡಿದಲ್ಲಿ ಅತ್ಯುತ್ತಮ ಪೊಲೀಸ್ ಇಲಾಖೆಯ ಸಲಹೆಗಾರ ಹಾಗೂ ಅತ್ಯುತ್ತಮ ಪೊಲೀಸ್ ಇಲಾಖೆಯ ಸ್ನೇಹಿತ ಎನ್ನುವ ಬಹುಮಾನಗಳನ್ನು ನೀಡುವುದಾಗಿ ರಾಯಚೂರು ಡಿವೈಎಸ್ಪಿ ಶಾಂತವೀರ ಅವರು ಪ್ರಕಟಿಸಿದರು.

ಇದೇ ಸಂದರ್ಭದಲ್ಲಿ ಸಿಪಿಐಗಳಾದ ನಾಗರಾಜ, ನಿಂಗಪ್ಪ, ಟ್ರಾಫಿಕ್ ಪೊಲೀಸ್ ಇಲಾಖೆಯ ಪಿಎಸ್ಐ ಸಣ್ಣ ಈರೇಶ್ ಸೇರಿದಂತೆ ಪೊಲೀಸ್ ಇಲಾಖೆಯ ಸಿಬ್ಬಂದಿ ಹಾಗೂ ವಿವಿಧ ಕಾಲೇಜು ವಿದ್ಯಾರ್ಥಿಗಳು ಹಾಗೂ ಆಟೋ ಚಾಲಕರು ಇದ್ದರು.

# ವ್ಯಸನ ಮುಕ್ತ ದಿನಾಚರಣೆಯು ಅರ್ಥಪೂರ್ಣವಾಗಿ ನಡೆಯಲಿ: ಅಪರ ಜಿಲ್ಲಾಧಿಕಾರಿ ಶಿವಾನಂದ

ಅಗತ್ಯ ಕ್ರಮ ವಹಿಸಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಆಗಸ್ಟ್ 1ರಂದು ಡಾ.ಮಹಾಂತ ಶಿವಯೋಗಿಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಕೆ, ಪ್ರತಿಜ್ಞಾವಿಧಿ ಬೋಧನೆ, ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಬೇಕು. ಮದ್ಯ ಮತ್ತು ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ವಿಷಯದ ಮೇಲೆ ಶಾಲೆಯೊಂದರ ಮಕ್ಕಳಿಗೆ ಪ್ರಬಂಧ ಸ್ಪರ್ಧೆ ಏರ್ಪಡಿಸಿ ಅರಿವು ಮೂಡಿಸಬೇಕು ಎಂದು ಬೇರೆ ಬೇರೆ ಇಲಾಖೆಯ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಜವಾಬ್ದಾರಿ ಹಂಚಿಕೆ ಮಾಡಿದರು. ವ್ಯಸನಮುಕ್ತ ದಿನಾಚರಣೆ ಹಿನ್ನೆಲೆಯಲ್ಲಿ ಮದ್ಯ ಮತ್ತು ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಜಿಲ್ಲೆಯ ಕವಿಗಳು, ಸಾಹಿತಿಗಳು, ಚಿಂತಕರಿಂದ ಲೇಖನ, ಕವಿತೆ, ಚುಟುಕು ಆಹ್ವಾನಿಸಿ ಅವುಗಳನ್ನು ದಿನಪತ್ರಿಕೆಗಳಿಗೆ ಕಳುಹಿಸಿ ಪ್ರಕಟಿಸಲು ಕ್ರಮವಹಿಸಬೇಕು ಎಂದು ಜಿಲ್ಲಾ ವಾರ್ತಾಧಿಕಾರಿಗಳಿಗೆ ಸೂಚನೆ ನೀಡಿದರು.

ತಹಸೀಲ್ದಾರರರಿಗೆ ಸೂಚನೆ: ವ್ಯಸನ ಮುಕ್ತ ದಿನಾಚರಣೆಯನ್ನು ಎಲ್ಲ ತಾಲೂಕು ಕೇಂದ್ರಗಳಲ್ಲಿ ತಹಸೀಲ್ದಾರಗಳ ನೇತೃತ್ವದಲ್ಲಿ ಆಯೋಜನೆ ಮಾಡಬೇಕು. ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಆಚರಣೆ ಮಾಡಲು ಈಗಿನಿಂದಲೇ ಸಿದ್ಧತೆ ಕೈಗೊಳ್ಳಬೇಕು ಎಂದು ರಾಯಚೂರ ಜಿಲ್ಲೆಯ ಸಿಂಧನೂರ, ಮಸ್ಕಿ, ಮಾನ್ವಿ, ಲಿಂಗಸಗೂರು, ಸಿರವಾರ, ದೇವದುರ್ಗ ಮತ್ತು ರಾಯಚೂರಿನ ತಹಸೀಲ್ದಾರಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕರಾದ ಗವಿಸಿದ್ದಪ್ಪ ಹೊಸಮನಿ ಅವರು ಮಾತನಾಡಿ, ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಪ್ರಯುಕ್ತ ಆಗಸ್ಟ್ 1ರಂದು ಆಚರಿಸಲ್ಪಡುವ ವ್ಯಸನ ಮುಕ್ತ ದಿನಾಚರಣೆ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ, ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಒಳಗೊಂಡು ಸಮಿತಿ ರಚಿಸಲಾಗಿದೆ. ದಿನಾಚರಣೆಗಾಗಿ ವಿವಿಧ ಇಲಾಖೆಗಳು ಮತ್ತು ಸಂಘ ಸಂಸ್ಥೆಗಳ ಸಹಕಾರ, ಸಮನ್ವಯ ಪಡೆದುಕೊಳ್ಳಲಾಗುವುದು ಎಂದು ತಿಳಿಸಿದರು.ಸಭೆಯಲ್ಲಿ ರಾಯಚೂರು ತಹಶೀಲ್ದಾರರಾದ ಸುರೇಶ ವರ್ಮಾ, ಶಾಲಾ ಶಿಕ್ಷಣ ಇಲಾಖೆಯ ದೈಹಿಕ ಶಿಕ್ಷಣ ಅಧಿಕಾರಿ ರಂಗಸ್ವಾಮಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಶಿವಪ್ಪ ಉಪ್ರಾಳ, ಜಿಲ್ಲಾ ಪೊಲೀಸ್ ಇಲಾಖೆಯ ತಿಮ್ಮಣ್ಣ ಚಾಮನೂರ, ವಾರ್ತಾ ಇಲಾಖೆಯ ಅಪ್ರೆಂಟಿಸ್ ತರಬೇತುದಾರರಾದ ನವೀನ್, ಲವ ಹಾಗೂ ಇನ್ನಿತರರು ಇದ್ದರು.

# ಎಲ್ಲ ಸಮಸ್ಯೆಗಳಿಗೂ ಶಿಕ್ಷಣವೊಂದೇ ಪರಿಹಾರ: ನ್ಯಾ.ಹೆಚ್.ಎ.ಸಾತ್ವಿಕ್

ಒಂದಿಲ್ಲೊಂದು ಸಾಮರ್ಥ್ಯ ಇದ್ದೆ ಇರುತ್ತದೆ. ಕಷ್ಟಗಳು ಎದುರಾದಾಗ ಕುಗ್ಗಬಾರದು. ಧೈರ್ಯವಾಗಿ ಎದುರಿಸಿ ನಿಂತಾಗ ಮಾತ್ರ ಸಾಧನೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಮಂಗಳಾ ಹೆಗಡೆ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಬಾಲ ಮಂದಿರದ ಮಕ್ಕಳ ಒಳಿತಿಗಾಗಿ ಮಕ್ಕಳ ಕಲ್ಯಾಣ ಸಮಿತಿಯು ಸದಾ ಸಿದ್ಧವಿರುತ್ತದೆ. ಮಕ್ಕಳು ನಮ್ಮ ದೇಶದ ಆಸ್ತಿ. ಮಕ್ಕಳ ಪ್ರಗತಿಗಾಗಿ ಸಮಿತಿಯು ಯಾವಾಗಲೂ ಶ್ರಮಿಸುತ್ತದೆ ಎಂದು ಹೇಳಿದರು.ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಅಮರೇಶ್ ಹಾವಿನ್ ಅವರು ಪ್ರಾಸ್ತಾವಿಕ ಮಾತನಾಡಿ, ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಸರ್ಕಾರವು ಅನೇಕ ಸೌಲತ್ತುಗಳನ್ನು ನೀಡಿದೆ. ಬಾಲ ಮಂದಿರಗಳು ಸಂಕಷ್ಟದಲ್ಲಿರುವ ಮಕ್ಕಳಿಗಾಗಿ ಕಾರ್ಯ ನಿರ್ವಹಿಸುತ್ತಿದ್ದು ಇಲ್ಲಿರುವ ಮಕ್ಕಳು ಅನೇಕ ಸಂಕಷ್ಟದ ಸನ್ನಿವೇಶಗಳಲ್ಲಿ ಇರುವವರಾಗಿದ್ದು, ಉತ್ತಮ ಅಧ್ಯಯನದ ಮೂಲಕ ಮುನ್ನಡೆಯಬೇಕು ಎಂದು ತಿಳಿಸಿದರು.ಸ್ಟೇಷನ್ ಬಜಾರ್ ಪ್ರೌಢಶಾಲೆಯ ಮುಖ್ಯ ಗುರುಗಳಾದ ರಾಧಾ ದೇವಿ ಹಾಗೂ ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾದ ಬಸವರಾಜ್ ಬ್ಯಾಗವಟ್ ಅವರು ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.ಇದೇ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾದ ಶ್ರೀಮತಿ ಶಾರದಾ ಪಾಟೀಲ್ ವಿವಿಧ ಸಂಸ್ಥೆಗಳ ಅಧೀಕ್ಷಕರು ಮತ್ತು ಸಿಬ್ಬಂದಿ ಭಾಗವಿಸಿದ್ದರು. ಬಾಲಕಿಯರ ಬಾಲ ಮಂದಿರದ ಅಧೀಕ್ಷಕರಾದ ಭಾರತಿ ನಾಯಕ್ ಸ್ವಾಗತಿಸಿದರು. ಬಾಲಕರ ಬಾಲ ಮಂದಿರದ ಅಧೀಕ್ಷಕರಾದ ನಾಗರಾಜ್ ನಾಯಕ್ ವಂದಿಸಿದರು.

# ರಸಗೊಬ್ಬರ ಅಕ್ರಮ ಮಾರಾಟ ರೈತರಿಗೆ ದರ ಹೆಚ್ಚಳ, ದಾಸ್ತಾನು ಮರೆಮಾಚಿದ ಆರೋಪ

ಮಾಡುತ್ತಿದ್ದಾರೆ ಎಂದು ಆರೋಪಿಸಲಾಗಿದೆ ಅಲ್ಲದೆ, ಅನಗತ್ಯ ಜಿಎಸ್‌ಟಿ ಸಹ ವಿಧಿಸಲಾಗುತ್ತಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಉತ್ತಮ ಮಳೆಯಾಗಿದ್ದರೂ, ಗೊಬ್ಬರ ಸಿಗದೇ ಇರುವುದರಿಂದ ರೈತರು ಬೇಸತ್ತಿದ್ದಾರೆ ತಾವುಗಳು ಕೂಡಲೇ ಮಾನ್ವಿ ಮತ್ತು ಸಿರವಾರ ತಾಲೂಕಿನಾದ್ಯಂತ ಇರುವ ಗೊಬ್ಬರ ಅಂಗಡಿಗಳಿಗೆ ಭೇಟಿ ನೀಡಿ ಮಾಲೀಕರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಅಂಗಡಿಯಲ್ಲಿ ದರಪಟ್ಟಿ ಅಳವಡಿಸಲು ತಿಳಿಸಿ, ರೈತರಿಗೆ ಸರಾಗವಾಗಿ ರಸಗೊಬ್ಬರ ದೊರಕುವಂತೆ ಸೂಕ್ತ ಕ್ರಮಕೈಗೊಳ್ಳಬೇಕು," ಎಂದು ಆಗ್ರಹಿಸಿದೆ. ಒಂದು ವೇಳೆ ಈ ವಿಷಯದ ಬಗ್ಗೆ ಜಿಲ್ಲಾಡಳಿತ ನಿರ್ಲಕ್ಷ್ಯ ತೋರಿದರೆ, "ನಮ್ಮ ಸಂಘಟನೆ ಹಾಗೂ ರೈತರೊಂದಿಗೆ ತಮ್ಮ ಕಚೇರಿ ಮುಂದೆ ಉಗ್ರ ಹೋರಾಟವನ್ನು ಹಮ್ಮಿಕೊಳ್ಳಲಾಗುವುದು" ಎಂದು ಕರ್ನಾಟಕ ದಲಿತ ರಕ್ಷಣಾ ವೇದಿಕೆ ಎಚ್ಚರಿಕೆ ನೀಡಿದೆ.

ಈ ಅಕ್ರಮ ಮಾರಾಟ ಮತ್ತು ದಾಸ್ತಾನು ಅಡಗಿಸುವಿಕೆಯು ರೈತರನ್ನು ತೀವ್ರ ಸಂಕಷ್ಟಕ್ಕೆ ಸಿಲುಕಿಸಿದೆ ಜಿಲ್ಲಾಡಳಿತ ಈ ಬಗ್ಗೆ ಏನು ಕ್ರಮ ಕೈಗೊಳ್ಳಲಿದೆ ಎಂಬುದನ್ನು ಕಾದು ನೋಡಬೇಕು.ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಕಾಶಿನಾಥ್ ಕುರ್ಡಿ, ನರಸರೆಡ್ಡಿ ಮಾನ್ವಿ, ಬುಡ್ಡಪ್ಪ ಕರೆಗುಡ್ಡ, ತಿಪ್ಪಣ್ಣ ಜಾನೇಕಲ್ ಸೇರಿದಂತೆ ಇತರರು ಇದ್ದರು

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**

**9743497111 9743496111**

# ಪಟ್ಟಣ ಪಂಚಾಯತಿ ಕರವಸೂಲಿ 50 ಲಕ್ಷ ದುರ್ಬಳಕೆ ಆರೋಪ ಪೌರಾಡಳಿತ ಇಲಾಖೆ ನಿರ್ದೇಶಕರಿಗೆ ದೂರು

**ಯುವ ಮಾರ್ಗ ಸುದ್ದಿ**



**ಸಿರವಾರ, ಜು.21–** ಪಟ್ಟಣ ಪಂಚಾಯಿತಿಗೆ ವಿವಿಧ ರೀತಿಯಲ್ಲಿ ಬಂದಿರುವ ಕರವಸೂಲಿಯಲ್ಲಿ 50 ಲಕ್ಷ ರೂ ಹಣವನ್ನು ಪ.ಪಂಚಾಯತಿ ಮುಖ್ಯಾಧಿ ಕಾರಿ ತಿಮ್ಮಪ್ಪ ಜಗ್ಗಿ ಹಾಗೂ ಅಧ್ಯಕ್ಷ ವೈ. ಭೂಪನ ಗೌಡ ಅವರು ಸುಮಾರು 50ಲಕ್ಷ ರೂಪಾಯಿ ಹಣವನ್ನು ದುರುಪಯೋಗ ಮಾಡಿಕೊಂಡಿದ್ದಾರೆ. ಎನ್.ಎ ಮಂಜೂರಾತಿ, ಬಡಾವಣೆ ನಿರ್ಮಾಣದಲ್ಲೂ ಅವ್ಯವಹಾರ ನಡೆದಿದೆ ಎಂದು ಪಟ್ಟಣ ಪಂಚಾಯತಿ ಸದಸ್ಯರಾದ ಅಜೇತ್ ಹೊನ್ನಟಗಿ ಅವರ ಪೌರಾಡಳಿತ ನರ್ದೇಶಕರಿಗೆ ಇವರಿಗೆ ಮನವಿ ಪತ್ರ ನೀಡಿ ಒತ್ತಾಯಿಸಿದ್ದಾರೆ.

ರಾಯಚೂರು ಜಿಲ್ಲೆ ಸಿರವಾರ ತಾಲೂಕು ಪಟ್ಟಣ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮುಖ್ಯಾಧಿಕಾರಿ ತಿಪ್ಪಪ್ಪ ಜಗ್ಗಿ ಹಾಗೂ ಅಧ್ಯಕ್ಷ ವೈ.ಭೂಪನಗೌಡ ಇವರು ಕರವಸೂಲಿ ಖಾತೆ ಯಲ್ಲಿ ಭಾರಿ ಭ್ರಷ್ಟಾಚಾರವೆಸಗಿದ್ದು, ಅಧಿಕಾರಿ ಗಳು ಮತ್ತು ಅಧ್ಯಕ್ಷರು ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಂಡು ಕರವಸೂಲಿ ಅನುದಾನವನ್ನು ಶೇ24.10% ಅನುದಾನವನ್ನು ಎಸ್ಸಿ/ಎಸ್ಟಿ ಜನರ ಅಭಿವೃದ್ಧಿಗಾಗಿ ಮೀಸಲಡಿಸಬೇಕೆಂದು ಸರ್ಕಾರದ ಆದೇಶವಿದೆ. ಆದರೂ ಸಹ ಆದೇಶವನ್ನು ಉಲ್ಲಂಘನೆ ಮಾಡಿ

ಮೀಸಲಿಡಬೇಕಾದ ಹಣವನ್ನು ತಮಗೆ ಬೇಕಾದ ಉದ್ಯಮಿದಾರರು. ಏಜೆನ್ಸಿ ಮತ್ತು ಎಂಟರ್ ಪ್ರೈಸೆಸ್‌ಗಳಿಗೆ ಹಾಗೂ ಕುಡಿಯುವ ನೀರು, ಇತರೆ ಕಾಮಗಾರಿಗಳಿಗೆ ಬಳಕೆ ಮಾಡಿ ಅನುದಾನವನ್ನು ಲೂಟಿ ಮಾಡಿರುತ್ತಾರೆ. ಸದರಿ ಅನುದಾನವನ್ನು ಅಧ್ಯಕ್ಷರು, ಸರ್ವ ಸದಸ್ಯರ ಸಮುಖದಲ್ಲಿ ಸಾಮಾನ್ಯ ಸಭೆಯನ್ನು ಕರೆದು ಚರ್ಚಿಸಿ, ಸರ್ವಾನುಮತದಿಂದ ಒಪ್ಪಿಗೆ ಪಡೆದು ಠರಾವು ಪಾಸ್ ಮಾಡಿ ಅನುದಾನವನ್ನು ಖರ್ಚು ಮಾಡುವುದು ಸರ್ಕಾರದ ಸುತ್ತೋಲೆಯಲ್ಲಿ ಸ್ಪಷ್ಟವಾಗಿ ನಿಖರವಾಗಿರುತ್ತದೆ.

ಆದರೆ ಅಧಿಕಾರಿಗಳು ಹಾಗೂ ಅಧ್ಯಕ್ಷರು ಯಾವುದೇ ಸಾಮಾನ್ಯ ಸಭೆಯನ್ನು ಕರೆಯದೆ ಸದಸ್ಯರ ಗಮನಕ್ಕೆ ತರದೆ ತಮಗೆ ಬೇಕಾದ ರೀತಿಯಲ್ಲಿ ಬೇಕಾಬಿಟ್ಟಿಯಾಗಿ ಅನುದಾನವನ್ನು ಖರ್ಚು ಮಾಡಿರುತ್ತಾರೆ. ಜನಸಮಾನ್ಯರ ಅಭಿವೃದ್ಧಿ ಕೆಲಸಕಾರ್ಯಗಳಿಗೆ ಖರ್ಚು ಮಾಡುವಂತೆ ಪಟ್ಟಣ ಪಂಚಾಯತಿ ಸದಸ್ಯರು ಸುಮಾರು ಬಾರಿ ಮನವಿ ಮಾಡಿದರು ಸಹ ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡಿರುತ್ತಾರೆ ಎನ್.ಎ.ನಿವೇಶನಗಳು, ಬಡಾವಣೆ ಮಾಡಲು ಮನವಿ ಮಾಡಿರುತ್ತಾರೆ.

ಸಂಬಂಧಪಟ್ಟ ಭೂಮಾಲೀಕರು, ಮುಖ್ಯಾಧಿಕಾ ರಿಗಳಿಗೆ ಅರ್ಜಿ ಸಲ್ಲಿಸಿದಾಗ ಆ ಅರ್ಜಿಯನ್ನು ಸ್ವೀಕರಿಸಿ ಅಧ್ಯಕ್ಷರ ಗಮನಕ್ಕೆ ತಂದು ಸರ್ವ ಸದಸ್ಯರ ಸಮುಖದಲ್ಲಿ ಸಾಮಾನ್ಯ ಸಭೆಯನ್ನು ಕೆರೆದು ಚರ್ಚಿಸಿ, ಸರ್ವಾನುಮತದಿಂದ ಒಪ್ಪಿಗೆ ಪಡೆದು ಆ ಬಡಾವಣೆಗೆ ನಿವೇಶನ ಸಲುವಾಗಿ ಅನುಮೋದನೆ ನೀಡುವುದು. ಆದರೆ ಮುಖ್ಯಾಧಿ ಕಾರಿಗಳು ಮತ್ತು ಅಧ್ಯಕ್ಷರು ಸಭೆಯನ್ನು ಕರೆಯದೆ ತಮಗೆ ಬೇಕಾದ ಸ್ಥಳದಲ್ಲಿ ಕುಳಿತುಕೊಂಡು ಕಾನೂನು ಭಾಹಿರವಾಗಿ ನಿವೇಶನ ಬಡಾವಣೆ ಗಳಿಗೆ ಅನುಮೋದನೆ ನೀಡುತ್ತಿರುತ್ತಾರೆ. ಈ ಅನುಮೋದನೆಯನ್ನು ಪಡೆದುಕೊಂಡು ಭೂ ಮಾಲೀಕರು ನಿವೇಶನಗಳನ್ನು ಮಾಡಿ ಮಾರಾಟ ಮಾಡುವ ಸಮಯದಲ್ಲಿ ಪಟ್ಟಣ ಪಂಚಾಯತಿಗೆ ತೆರಿಗೆ ಪಾವತಿ ಮಾಡಿದನಂತರ ಖಾತಾ, ಮ್ಯೂಟೇ ಷನ್ ಮಾಡಲು ಸರ್ಕಾರದ ನಿಯಮವಿರುತ್ತದೆ. ಆದರೆ ಬೇಕಾಬಿಟ್ಟಿಯಾಗಿ ಇಂತಿಷ್ಟು ಹಣ ಪಡೆದುಕೊಂಡು ಖಾತೆ ಮಾಡುವ ಸಮಯದಲ್ಲಿ ಅವ್ಯವಹಾರ ಮಾಡಿರುವ ಮುಖ್ಯಾಧಿಕಾರಿಗಳು ಮತ್ತು ಅಧ್ಯಕ್ಷರ ಮೇಲೆ ಕಾನೂನು ಕ್ರಮ ತೆಗೆದು ಕೊಂಡು ಮುಖ್ಯಾಧಿಕಾರಿಗಳನ್ನು ಅಮಾನತ್ತು ಮಾಡುವಂತೆ ಒತ್ತಾಯಿಸಿದ್ದಾರೆ.

# ಭಾರಿ ಮಳೆ: ಜಲಾವೃತ ಪ್ರದೇಶಕ್ಕೆ ಪಾಲಿಕೆಯ ಆಯುಕ್ತ ಜುಬಿನ್ ಮೊಹಪಾತ್ರ ಭೇಟಿ

**ಯುವ ಮಾರ್ಗ ಸುದ್ದಿ**



**ರಾಯಚೂರು,ಜು.22–** ರಾಯಚೂರ ಜಿಲ್ಲೆಯಲ್ಲಿ ಜುಲೈ 21ರಂದು ಸುರಿದ ಭಾರಿ ಮಳೆ ಹಿನ್ನೆಲೆಯಲ್ಲಿ ಜಲಾವೃತ ಗೊಂಡ ವಿವಿಧ ಪ್ರದೇಶಗಳಿಗೆ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಂಗಳವಾರ ಭೇಟಿ ನೀಡಿ ಪರಿಶೀಲಿಸಿದರು. ವಿದ್ಯಾ ಭಾರತಿ ಶಾಲೆಯ ಮಾರ್ಗದಲ್ಲಿರುವ ರೈಲ್ವೆ ಕೆಳ ಸೇತುವೆ ಬಳಿ ಭಾರೀ ಪ್ರಮಾಣದಲ್ಲಿ ಮಳೆ ನೀರು ನಿಂತು ರಸ್ತೆ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗಿರುವುದನ್ನು ಆಯುಕ್ತರು ಖುದ್ದು ವೀಕ್ಷಣೆ ನಡೆಸಿದರು.

ಈ ಕೆಳ ಸೇತುವೆ ಬಳಸಿ ನಿತ್ಯ ಸಾವಿರಾರು ಸಂಖ್ಯೆಯ ವಾಹನಗಳು ಸಂಚರಿಸುತ್ತವೆ. ನಿಜಲಿಂಗಪ್ಪ ಕಾಲೊನಿ, ವಿದ್ಯಾ ಭಾರತಿ ಶಾಲೆ ಸೇರಿದಂತೆ ಬೇರೆ ಬೇರೆ ಕಾಲೊನಿಗೆ ತೆರಳಲು ಇದೆ ಪ್ರಮುಖ ಮಾರ್ಗವಾಗಿದೆ. ಮಳೆಯಾದಾಗೊಮ್ಮೆ ಇಲ್ಲಿ ನೀರು ನಿಂತು ಸುಗಮವಾಗಿ ಸಂಚರಿಸಲು ಸಾಕಷ್ಟು ತೊಂದರೆಯಾಗುತ್ತಿದೆ ಎಂದು ದ್ವಿಚಕ್ರ ವಾಹನ ಸವಾರರು ಆಯುಕ್ತರಿಗೆ ತಿಳಿಸಿದರು.ನಿಮ್ಮ ಸಮಸ್ಯೆ ಏನೆಂದು ಅರ್ಥವಾಗಿದೆ. ಸದ್ಯಕ್ಕೆ ಪಂಪ್ ಮೂಲಕ ನೀರನ್ನು ಬೇರೆಡೆ ಸಾಗಿಸುವ ಕಾರ್ಯ ನಡೆದಿದೆ. ಈ ಮಾರ್ಗವಾಗಿ ಸಂಚರಿಸುವ ಜನರಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದ ಹಾಗೆ ವಾರದೊಳಗೆ ಇದನ್ನು ಸರಿಪಡಿಸಲಾಗುವುದು ಎಂದು ಆಯುಕ್ತರು ತಿಳಿಸಿದರು.ಗಂಜ್ ಪ್ರದೇಶ, ಎಪಿಎಂಸಿ ಸೇರಿದಂತೆ ವಿವಿಧೆಡೆ ಸಂಚರಿಸಿದ ಆಯುಕ್ತರು, ಆಯಾ ಕಡೆಗಳಲ್ಲಿ ಮಳೆ ನೀರು ಹರಿಯದೇ ನಿಂತಿರುವುದನ್ನು ಗಮನಿಸಿದರು.ಗಟಾರುಗಳಲ್ಲಿ ಎಲ್ಲೆಡೆ ಪ್ಲಾಸ್ಟಿಕ್ ತುಂಬಿರುವುದರಿಂದ ನೀರು ಹರಿಯದೇ ನಮಗೆ ಸಾಕಷ್ಟು ತೊಂದರೆಯಾಗಿದೆ ಎಂದು ಇದೆ ವೇಳೆ ಬೀದಿ ಬದಿಯ ವ್ಯಾಪಾರಸ್ಥರು ಆಯುಕ್ತರ ಮುಂದೆ ತಮ್ಮ ಅಳಲನ್ನು ತೋಡಿಕೊಂಡರು.ರಾಯಚೂರ ನಗರದ ಕೆಲ ಪ್ರದೇಶಗಳಲ್ಲಿ ಹತ್ತಾರು ವರ್ಷಗಳಿಂದ ಒಳ ಚರಂಡಿಗಳು ಕಸ ತುಂಬಿಕೊಂಡಿವೆ. ಇಲ್ಲಿ ಪ್ಲಾಸ್ಟಿಕ್ ತುಂಬಿ ನೀರು ಚಲಿಸದಂತಾಗಿದೆ. ನಗರದ ಯಾವುದೇ ಕಡೆಗಳಲ್ಲಿ ಮಳೆ ನೀರು ನಿಲ್ಲದೇ ಸರಾಗವಾಗಿ ಚರಂಡಿಯಲ್ಲಿ ಹರಿಯುವಂತೆ ಒಳಚರಂಡಿ ಶುಚಿತ್ವ ಕಾರ್ಯವನ್ನು ಈ ಕೂಡಲೇ ಆರಂಭಿಸಲಾಗುವುದು ಎಂದು ಇದೆ ವೇಳೆ ಆಯುಕ್ತರು ತಿಳಿಸಿದರು.ಸಾರ್ವಜನಿಕರಲ್ಲಿ **ಆಯುಕ್ತರ ಮನವಿ:** ಅಂಗಡಿ ಮಾಲೀಕರು ಮತ್ತು ಸಾರ್ವಜನಿಕರು ಕಸವನ್ನು ಎಲ್ಲೆಂದರಲ್ಲಿ ಎಸೆಯಬಾರದು. ಪ್ಲಾಸ್ಟಿಕ್ ಸೇರಿದಂತೆ ಯಾವುದೇ ಕಸವನ್ನು ಪಾಲಿಕೆಯ ಕಸ ಎತ್ತುವ ವಾಹನಗಳಿಗೆ ಹಾಕಬೇಕು. ಕೊಳಚೆ ನೀರನ್ನು ಯಾರು ಸಹ ನೇರವಾಗಿ ಡ್ರೈನೇಜ್ ಪೈಪಗೆ ಬಿಡಬಾರದು ಎಂದು ಇದೆ ವೇಳೆ ಆಯುಕ್ತರು ರಾಯಚೂರ ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ ಮಾಡಿದರು.

# ಚಿನ್ನದಂಗಡಿ ದರೋಡೆ: ಮೂವರು ಅಂತರರಾಜ್ಯ ಕುಖ್ಯಾತ ದರೋಡೆಕೋರರ ಬಂಧನ



**ಕಲಬುರಗಿ,ಜು.22–**ಈಚೆಗೆ ನಗರದ ಸರಾಫ್ ಬಜಾರ್‌ದ ಮಲ್ಲಿಕ್ ಜ್ಯೂವೇಲರ್ಸ್‌ನಲ್ಲಿ ನಡೆದ ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಅಂತರರಾಜ್ಯ ಕುಖ್ಯಾತ ಚಿನ್ನದಂಗಡಿ ದರೋಡೆಕೋರರನ್ನು ಬಂಧಿಸಿ 2.10 ಕೋಟಿ ರೂ.ಮೌಲ್ಯದ 2.865 ಕೆ.ಜಿ.ಬಂಗಾರ ಮತ್ತು 4.80 ಲಕ್ಷ ರೂ.ನಗದು ಹಣ ವಶ ಪಡಿಸಿಕೊಳ್ಳಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದರು.

ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತ ಈ ವಿಷಯ ತಿಳಿಸಿದ ಅವರು, ಈ ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪಶ್ಚಿಮ ಬಂಗಾಳದ ಅಯೋಧ್ಯಾ ಪ್ರಸಾದ ಚವ್ಹಾಣ್ ತಂದೆ ಸೀತಾರಾಮ ಚವ್ಹಾಣ್ (48), ಫಾರುಕ್ ಅಹೆಮದ್ ಮಲ್ಲಿಕ್ ತಂದೆ ಅಬ್ದುಲ್ ವಾಹಬ್ ಮಲ್ಲಿಕ್ (40) ಮತ್ತು ಮಹಾರಾಷ್ಟ್ರದ ಸೋಹೆಬ್ ಶೇಕ್ ಅಲಿಯಾಸ್ ಬಾದಶಾ ತಂದೆ ಮಹ್ಮದ್ ಇಸ್ಮಾಯಿಲ್ ಶೇಕ್ (30) ಎಂಬುವವರನ್ನು ಬಂಧಿಸಿ 2.10 ಕೋಟಿ ರೂ.ಮೌಲ್ಯದ 2.865 ಗ್ರಾಂ.ಬಂಗಾರದ ಆಭರಣ ಮತ್ತು 4.80 ಲಕ್ಷ ರೂ.ನಗದು ಹಣ ವಶ ಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

ಇದೇ ತಿಂಗಳು (ಜು.11) 11 ರಂದು ನಗರದ ಸರಾಫ್ ಬಜಾರ್‌ದಲ್ಲಿರುವ ಮಲ್ಲಿಕ್ ಜ್ಯೂವೇಲರ್ಸ್ ಅಂಗಡಿಗೆ ನುಗ್ಗಿದ ನಾಲ್ವರು ದರೋಡೆಕೋರರು ಅಂಗಡಿ ಮಾಲೀಕ ಮಹ್ಮದ್ ಸಬ್ಬಾತುಲ್ಲಾ ಮಲ್ಲಿಕ್ ಅವರ ಹಣೆಗೆ ಗನ್ ಮತ್ತು ಕುತ್ತಿಗೆಗೆ ಚಾಕು ಹಚ್ಚಿ, ಸಿಸಿಟಿವಿ ವೈರ್ ಕಟ್ ಮಾಡಿ ಅಂಗಡಿಯಲ್ಲಿದ್ದ ಚಿನ್ನಾಭರಣ ದೋಚಿಕೊಂಡು ಹೋಗಿದ್ದರು.

ಈ ಸಂಬಂಧ ಅವರು ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು. ಈ ದೂರಿನ ಅನ್ವಯ ಪ್ರಕರಣದ ಪತ್ತೆಗೆ ನಗರ ಪೊಲೀಸ್ ಆಯುಕ್ತರ ಮಾರ್ಗದರ್ಶನದಲ್ಲಿ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ್ ಅವರನ್ನು ಒಳಗೊಂಡಂತೆ 5 ವಿಶೇಷ ತಂಡಗಳನ್ನು ರಚಿಸಲಾಗಿತ್ತು. ಈ ತಂಡ ಕರ್ನಾಟಕ ಪಶ್ಚಿಮ ಬಂಗಾಳ, ಉತ್ತರ ಪ್ರದೇಶ, ತೆಲಂಗಾಣ ರಾಜ್ಯಗಳಲ್ಲಿ ಕಾರ್ಯಾಚರಣೆ ನಡೆಸಿ ಮೂವರು ಅಂತರರಾಜ್ಯ ಕುಖ್ಯಾತ ಚಿನ್ನದಂಗಡಿ ದರೋಡೆಕೋ ರರನ್ನು ಬಂಧಿಸಿ ಚಿನ್ನಾಭರಣ ಮತ್ತು ನಗದು ಹಣವನ್ನು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿದರು.

ಈ ಮುಂಚೆ ಅಂತರರಾಜ್ಯ ದರೋಡೆಕೋರರು 10-15 ಪ್ರಕರಣಗಳಲ್ಲಿ ಭಾಗಿಯಾಗಿದ್ದರು ಎಂದು ತಿಳಿಸಿ ದರು. ಅಂತರರಾಜ್ಯ ಕುಖ್ಯಾತ ದರೋಡೆ ಬಂಧಿಸುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ಅವರು ಶ್ಲಾಘಿಸಿದರು.ಸುದ್ದಿಗೋಷ್ಠಿಯಲ್ಲಿ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ್ ಮತ್ತು ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

# ಉಪ ರಾಷ್ಟ್ರಪತಿ ಹುದ್ದೆಗೆ ಜಗದೀಪ್ ಧನ್ಕರ್ ರಾಜೀನಾಮೆ



**ನವದೆಹಲಿ, ಜು.21–**ಮಹತ್ವದ ಬೆಳವಣಿಗೆಯೊಂದರಲ್ಲಿ ಉಪರಾಷ್ಟ್ರಪತಿ ಹುದ್ದೆಗೆ ಇಂದು ರಾಜೀನಾಮೆ ನೀಡಿದ್ದಾರೆ.

ತಮ್ಮಅಧಿಕೃತ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಆರೋಗ್ಯದ ಕಡೆ ಗಮನಹರಿಸಬೇಕಾಗಿದೆ ಹಾಗೂ ವೈದ್ಯರ ಸಲಹೆ ಮೇರೆಗೆ ರಾಜೀನಾಮೆ ನೀಡುತ್ತಿರುವುದಾಗಿ ತಿಳಿಸಿದ್ದಾರೆ.

ಇಂದಿನಿಂದ ಸಂಸತ್ತಿನ ಮುಂಗಾರು ಅಧಿವೇಶನದಲ್ಲಿ ಸಭಾಪತಿಯಾಗಿ ಕಲಾಪ ನಡೆಸಿದ ಬೆನ್ನಲ್ಲೇ ಉಪರಾಷ್ಟ್ರಪತಿ ಹುದ್ದೆಗೆ ರಾಜೀನಾಮೆ ಸಲ್ಲಿಸಿದ್ದಾರೆ.

ಸಂವಿಧಾನದ ಕಲಂ (67)ನ ಅನುಸಾರ ತಕ್ಷಣದಿಂದ ಜಾರಿಗೆ ಬರುವಂತೆ ಉಪರಾಷ್ಟ್ರಪತಿ ಹುದ್ದೆಗೆ ರಾಜೀನಾಮೆ ನೀಡುತ್ತಿರುವುದಾಗಿ ಉಪರಾಷ್ಟ್ರಪತಿ ಭವನದ ಕಚೇರಿ ಬಿಡುಗಡೆ ಮಾಡಿರುವ ಪ್ರಕಟಣೆ ತಿಳಿಸಿದೆ.

ತಮಗೆ ಬೆಂಬಲ ನೀಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಪ್ರಧಾನಮಂತ್ರಿ ನರೇಂದ್ರಮೋದಿ ಜಗದೀಪ್ ಧನ್ಕರ್ ಧನ್ಯವಾದ ಸಲ್ಲಿಸಿದ್ದಾರೆ.

# ಶಾಲಾ ಸಂಸತ್ ರಚನೆ ಮಕ್ಕಳಲ್ಲಿ ನಾಯಕತ್ವ ಗುಣ ಬೆಳೆಸುತ್ತದೆ



**ಬಾಗಲಕೋಟೆ, ಜು.22–** ಇಂದಿನ ಮಕ್ಕಳೇ ನಾಳಿನ ನಾಗರಿಕರು ದೇಶದ ಭವಿಷ್ಯವನ್ನು ರೂಪಿಸುವಲ್ಲಿ ನಾಯಕತ್ವ ಗುಣ ಪ್ರಮುಖ ಪಾತ್ರವಹಿಸುತ್ತದೆ ಪ್ರತಿ ಶಾಲೆಗಳಲ್ಲಿ ಶಾಲಾ ಸಂಸತ್ ರಚನೆಯು ಮಕ್ಕಳಲ್ಲಿ ನಾಯಕತ್ವ ಗುಣ ಬೆಳೆಸುತ್ತದೆಂದು ಶ್ರೀ ಹುಚ್ಚೇಶ್ವರ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಶಿಕ್ಷಣ ಹಾಗೂ ಗ್ರಾಮ ನಗರಾಭಿವೃದ್ಧಿ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಡಾ.ಟಿ.ಹೆಚ್.ಸನಗಿನ ಶಾಲಾ ಮಕ್ಕಳನ್ನುದ್ದೇಶಿಸಿ ಮಾತನಾಡಿದರು.

ತಾಲೂಕಿನ ಗದ್ದನಕೇರಿ ಗ್ರಾಮದ ಶ್ರೀ ಹುಚ್ಚೇಶ್ವರ ಪೂರ್ವ ಹಾಗೂ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಶಾಲಾ ಸಂಸತ್ ರಚನಾ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತ ನಾಡಿದ ಅವರು ಪ್ರಜಾ ಪ್ರಭುತ್ವ ನಿಂತಿರುವುದೇ ಮತದಾನದ ಮೇಲೆ, ನಮ್ಮ ರಾಷ್ಟ್ರದ ಆಡಳಿತ ಸರಿಯಾದ ರೀತಿಯಲ್ಲಿ ನಡೆಯಬೇಕಾದರೆ ಕಾಲಕಾಲಕ್ಕೆ ಚುನಾವಣೆಗಳು ನಡೆಯುತ್ತಿರಬೇಕು ಜವಬ್ದಾರಿಯುತ ನಾಯಕರನ್ನು ಆಯ್ಕೆ ಮಾಡುವುದು ಮತದಾರ ಪ್ರಭುಗಳ ಕೈಯಲ್ಲಿದೆ ಎಂದು ಹೇಳಿದರು.

ಶಾಲಾ ಚುನಾವಣೆ ಪ್ರಕ್ರಿಯೆ ಮತ್ತು ಹಂತಗಳ ಕುರಿತು ಚುನಾವಣೆ ಮುಖ್ಯ ಅಧಿಕಾರಿಯಾಗಿ ಮುಖ್ಯಗುರುಮಾತೆ ಎಮ್.ಟಿ.ಸನಗಿನ ತಿಳಿಸಿದರು. ಶಾಲಾ ಕೊಠಡಿಗಳಲ್ಲಿ ಚುನಾವಣೆ ಬೂತ ನಿರ್ಮಾಣ ಮಾಡಿ ಮಕ್ಕಳನ್ನು ಪೋಲೀಸ್ ಹಾಗೂ ಆರ್ಮಿ ಸಿಬ್ಬಂಧಿಯನ್ನು ರಚನೆ ಮಾಡಿ ಎಲ್ಲ ಶಿಕ್ಷಕ ಸಿಬ್ಬಂಧಿ ವರ್ಗದವರನ್ನು ಪೋಲ್‌ಗಳ ಅಧಿಕಾರ ಹಾಗೂ ವಿವಿಧ ಅಧಿಕಾರ ನೀಡಿ ಚುನಾವಣೆಯನ್ನು ಯಶಸ್ವಿಗೊಳಿಸಲಾಯಿತು. ಮಕ್ಕಳಲ್ಲಿ ಚುನಾವಣೆ ಹಾಗೂ ಸಂಸತ್ ರಚನೆ ಕುರಿತು ಸಂಪೂರ್ಣ ಜ್ಞಾನ, ತಿಳುವಳಿಕೆ ನೀಡಲಾಯಿತು.

ಶಾಲಾ ಸಂಸತ್ ನಲ್ಲಿ ಪ್ರಧಾನ ಮಂತ್ರಿಯನ್ನಾಗಿ ಪ್ರತಿಭಾ ಕುಂಬಾರ, ಉಪ ಪ್ರಧಾನ ಮಂತ್ರಿ ಪ್ರವೀಣ ಲೆಂಕೆಪ್ಪನವರ ಹಾಗೂ ಮಹಿಳಾ ಪ್ರತಿನಿಧಿ ಕವಿತಾ ಗಣಕುಮಾರಮಠ, ಶಿಕ್ಷಣ ಮಂತ್ರಿ ಜೋಶ್ಮಿತಾ ಕೊಪ್ಪಳ, ಕ್ರೀಡಾ ಮಂತ್ರಿ ಪ್ರದೀಪ ಪಾಟೀಲ, ಸಾಂಸ್ಕೃತಿಕ ಮಂತ್ರಿ ಲಕ್ಷ್ಮೀ ಕುಂಬಾರ, ಶಿಸ್ತು ಮಂತ್ರಿ ವೀಣಾ ಗಣಕುಮಾರಮಠ, ಹಣಕಾಸು ಮಂತ್ರಿ ಸುಸ್ಮಿತಾ ಬೂದಿಹಾಳ, ಆರೋಗ್ಯ ಮಂತ್ರಿ ಪ್ರೀತಮ ಗುರಿಕಾರ, ಪ್ರವಾಸ ಮಂತ್ರಿ ಐಶ್ವರ್ಯ ಹಿರೇಮಠ ಹೀಗೆ ಮಂತ್ರಿಮಂಡಲ ರಚಿಸಿ ಪ್ರಮಾಣ ವಚನ ಬೋಧಿಸಲಾಯಿತು. ಪ್ರತಿಯೊಂದು ಹುದ್ದೆಗೂ ಮಾರ್ಗದರ್ಶಕ ಶಿಕ್ಷಕರನ್ನು ಆಯ್ಕೆಮಾಡಲಾಯಿತು.

# ನಿಲೋಗಲ್ ಗ್ರಾಮಕ್ಕೆ ಸ್ಮಶಾನ ಭೂಮಿ ಮಂಜೂರು ಮಾಡಲು ಆಗ್ರಹ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜು.22–** ತಾಲೂಕಿನ ಗೆಜ್ಜಲಗಟ್ಟಾ ಗ್ರಾಮ ಪಂಚಾಯತ್ ವ್ಯಾಪ್ತಿಯ ನಿಲೋಗಲ್ ಗ್ರಾಮಕ್ಕೆ ಸ್ಮಶಾನ ಭೂಮಿ ಮಂಜೂರು ಮಾಡುವಂತೆ ಜಯ ಕರ್ನಾಟಕ ರಕ್ಷಣಾ ಸೇನೆ ಕಾರ್ಯಕರ್ತರು ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ನಿಲೋಗಲ್ ಗ್ರಾಮದಲ್ಲಿ ಸ್ಮಶಾನ ಇಲ್ಲದೇ ಶವ ಸಂಸ್ಕಾರ ಮಾಡಲು ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ. ಈ ಹಿಂದೆ ಖಾಸಗಿ ಜಮೀನಿನಲ್ಲಿ ಶವ ಸಂಸ್ಕಾರ ಮಾಡಲಾಗುತ್ತಿತ್ತು. ಆದರೆ, ಭೂ ಮಾಲೀಕರು ಸಂಸ್ಕಾರಕ್ಕೆ ಅವಕಾಶ ಕೊಡದೇ ಸ್ಮಶಾನ ಭೂಮಿಯನ್ನು ಅತಿಕ್ರಮಿಸಿಕೊಂಡಿದ್ದಾರೆ. ಇದರಿಂದ ಗ್ರಾಮದಲ್ಲಿ ಯಾರಾದರೂ ಮರಣ ಹೊಂದಿದರೆ ಶವ ಸಂಸ್ಕಾರ ಎಲ್ಲಿ ಮಾಡಬೇಕೆನ್ನುವ ಚಿಂತೆ ಗಾಮಸ್ಥರಲ್ಲಿ ಕಾಡುತ್ತಿದೆ. ನಿಲೋಗಲ್ ಗ್ರಾಮದ ಸಮಸ್ಯೆ ಅರಿತ ಗಾಮದ ಪಭುಲಿಂಗ ಎನ್ನುವವರು ತಮ್ಮ ಜಮೀನು ಸ.ನಂ.268/* 10.24 ಎಕರೆ ಜಮೀನಿನಲ್ಲಿ ಸ್ಮಶಾನಕ್ಕೆ ಬೇಕಾಗುವಷ್ಟು ಭೂಮಿ ಕೊಡಲು ಮುಂದೆ ಬಂದಿದ್ದಾರೆ. ತಾಲೂಕಾಡಳಿತ ಪರಿಶೀಲಿಸಿ ಕೂಡಲೇ ಕಮಕ್ಕೆ ಮುಂದಾಗಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘಟನೆ ಅದ್ಯಕ್ಷ ಹನುಮಂತ ನಾಯಕ, ಪ್ರಕಾಶ ಕುರಿ, ಪವೀಣ ನಿಲೋಗಲ್, ನಿಂಗಪ್ಪ ರಾಮಲೂಟಿ, ಆದಪ್ಪ ನಾಯಕ, ಅಮರೇಗೌಡ, ಮಲ್ಲೇಶ ಗುರಿಕಾರ. ಶಿವುರೆಡಿ. ರಾಜಾಸಾಬ, ಸಲೀಮ್ ಪಾಷಾ, ದುರುಗಪ್ಪ ರಾಮಲೂಟಿ, ಮೋಹಿನ್‌ಖಾನ್, ಉಮೇಶ ನಾಯಕ ಸೇರಿದಂತೆ ಇದ್ದರು.

# ಚಂದ್ರಕಾಂತ್‌ಗೆ ಶಂಕರ ಪ್ರಸಾದ ದುಬೆ ಪ್ರಶಸ್ತಿ ಪ್ರದಾನ

**ಬಸವಕಲ್ಯಾಣ, ಜು.22–**ಹೆಚ್ಚುತ್ತಿರುವ ನಕಲಿ ಪತ್ರಕರ್ತರ ಹಾವಳಿಯ ನಡುವೆ ನೈಜ ಪತ್ರಕರ್ತರು, ನೈಜ ಪತ್ರಿಕೊದ್ಯಮ ಉಳಿಸಿಕೊಂಡು ಹೋಗುವ ಸಂದರ್ಭ ಎದುರಾಗಿದೆ, ಸುದ್ದಿ ಮನೆಗೆ ನುಗ್ಗುವ ಕ್ರಿಮಿನಲ್ ಪತ್ರಕರ್ತರನ್ನು ಹೊರ ದಬ್ಬುವ ಕೆಲಸ ನಡೆಯಬೇಕಾದ ಅಗತ್ಯವಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ತಿಳಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಘಟಕದಿಂದ ನಗರದ ತ್ರಿಪುರಾಂತ ಯಾತ್ರಿ ನಿವಾಸದಲ್ಲಿ ಅಯೋಜಿಸಲಾಗಿದ್ದ ಪತ್ರಿಕಾ ದಿನಾಚರಣೆ ಮತ್ತು ಶಂಕರಪ್ರಸಾದ ದುಬೆ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಾನು ಪತ್ರಕರ್ತ ಎಂದು ಹೇಳಿಕೊಂಡು ಬರುವವರ ಸಂಖ್ಯೆ ದಿನೆ, ದಿನೆ ಹೆಚ್ಚಾಗುತ್ತಿದೆ. ಅಸಲಿ ಪತ್ರಕರ್ತರಿಗಿಂತ ನಕಲಿ ಪತ್ರಕರ್ತರ ಸಂಖ್ಯೆ ಜಾಸ್ತಿ ಆಗಿದೆ. ಬ್ಲ್ಯಾಕ್ ಮೇಲ್ ಪತ್ರಕರ್ತರ, ವಿಜಿಟಿಂಗ್ ಕಾರ್ಡ್ ಹಿಡಿದು ಬರುವ ನಕಲಿ ಪತ್ರಕರ್ತರ ಹಾವಳಿ ಹೆಚ್ಚಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಮಾದ್ಯಮದಲ್ಲಿ ಕೆಲಸ ಮಾಡುವರ ಜವಾಬ್ದಾರಿ ಮಹತ್ವದ್ದಾಗಿದೆ. ವೃತ್ತಿಗೆ ಬದ್ಧತೆಯಿಂದ ಪ್ರಾಮಾಣಿಕವಾಗಿ ಕೆಲಸ ಮಾಡುವ ಪತ್ರರ್ತರ ಸಂಖ್ಯೆಯಲ್ಲಿ ಹೆಚ್ಚಾಗಬೇಕಿದೆ. ಸಮಾಜ ನಮ್ಮನ್ನು ಗಮನಿಸುತ್ತಿದೆ ಎನ್ನುವ ಎಚ್ಚರಿಕೆಯಿಂದ ಸದಾ ಕಾರ್ಯನಿರ್ವಹಿಸಸಬೇಕಿದೆ. ವೃತ್ತಿಗೆ ಕಳಂಕ ಬಾರದ ರೀತಿಯಲ್ಲಿ ನಡೆದುಕೊಳ್ಳಬೇಕಿದೆ. ಕಾರ್ಯ ನಿರತರಿಗೆ ಮಾತ್ರ ನಮ್ಮ ಸಂಘಟನೆ ಇದೆಯೇ ಹೊರತು ಮರೆತವರಿಗಲ್ಲ ಎಂದರು.

ಪ್ರಶಸ್ತಿ ಪ್ರದಾನ ಮಾಡಿದ ಶಾಸಕ ಶರಣು ಸಲಗರ ಮಾತನಾಡಿ, ಪತ್ರಿಕೋದ್ಯಮದ ಮೆರಗು ಹೆಚ್ಚಿಸುವ ಕೆಲಸ ಪತ್ರಕರ್ತರಿಂದ ಅಗಬೇಕು. ಸಮಾಜದ ತಿದ್ದುವ ಕೆಲಸ ಮಾಡಬೇಕು. ಪತ್ರಿಕಾ ಭವನ ಸೇರಿ ಅಗತ್ಯವಿರುವ ಕಲ್ಪಿಸಲು ಪ್ರಯತ್ನಿಸುತ್ತೇನೆ ಎಂದು ಭರವಸೆ ನೀಡಿದ ಅವರು, ಎರಡು ದಿನಗಳ ಹಿಂದೆ ತಾವು ಆಡಿದ ಮಾತಿನಿಂದ ನೋವು ಆಗಿದ್ದಲ್ಲಿ ಪ್ರಾಮಾಣಿಕ ಪತ್ರಕರ್ತರಲ್ಲಿ ನಾನು ಕ್ಷಮೆ ಕೋರುತ್ತೇನೆ ಎಂದರು. ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ಅಧ್ಯಕ್ಷ ಬಿ.ವಿ.ಮಲ್ಲಿಕಾರ್ಜುನಯ್ಯ ಮಾತನಾಡಿ, ವರ್ಷದಲ್ಲಿ ನಾವು ಮಾಡಿದ ಕೆಲಸದ ಬಗ್ಗೆ ಅತ್ಮಾವಲೋಕನ ಮಾಡಿಕೊಂಡು ತಪ್ಪುಗಲನ್ನು ತಿದ್ದಿಕೊಳ್ಳುವದೇ ಪತ್ರಿಕಾ ದರ್ಮ. ಇದು ಪತ್ರಿಕಾ ದಿನ ಆಚರಣೆಯ



ಉದ್ದೇಶವೂ ಆಗಿದೆ. ನಿಷ್ಪಕ್ಷಪಾತವಾಗಿ ಪ್ರಮಾಣಿಕವಾಗಿ ಕೆಲಸ ಮಾಡಲು ಮುಂದಾಗಬೇಕು ಎಂದರು. ಜಿಲ್ಲಾ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಮಾತನಾಡಿ, ಕೋವಿಡ್ ಕಾಲದಲ್ಲಿ ಪ್ರಾಣ ಕಳೆದುಕೊಂಡ 52 ಜನ ಪತ್ರಕರ್ತರ ಕುಟುಂಬಕ್ಕೆ ಸಿಎಂ ಪರಿಹಾರ ನಿಧಿಯಿಂದ ತಲಾ 5 ಲಕ್ಷ ಪರಿಹಾರ, ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ಇತರ ಸೌಲಭ್ಯವನ್ನು ಕೊಡಿಸುವಲ್ಲಿ ಯಶಸ್ವಿಯಾದ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಅವರಿಗೆ ಅಭಿನಂದಿಸುವುದದಾಗಿ ತಿಳಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ. ಲೋಕೇಶ, ನಗರಸಭೆ ಅಧ್ಯಕ್ಷ ಎಂಡಿ ಸಗೀರೋದ್ದಿನ್, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಭವಾನಿಸಿಂಗ್ ಠಾಕೂರ, ಜಿಲ್ಲಾಧ್ಯಕ್ಷ ಡಿ.ಕೆ.ಗಣಪತಿ, ರಾಜ್ಯ ಪ್ರತಿನಿಧಿ ಬಸವರಾಜ ಕಾಮಶೆಟ್ಟಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ದಿಲೀಪಕುಮಾರ ಉತ್ತಮ, ನಿವೃತ್ತ ಅಭಿಯಂತರ ಚಂದ್ರಶೇಖರ್ ದುಬೆ ಉಪಸ್ಥಿತರಿದ್ದರು.

# ನಟ ಪ್ರಕಾಶ್ ರಾಜ್ ಸೇರಿ ನಾಲ್ವರಿಗೆ ಇಡಿ ಸಮನ್ಸ್

**ಹೈದರಾಬಾದ್,ಜು.22–** ಬೆಟ್ಟಿಂಗ್ ಆಪ್ ಪ್ರಕರಣದ ಸಂಬಂಧ ಖ್ಯಾತ ನಟರಾದ ರಾಣಾ ದಗ್ಗುಬಾಟಿ ಮತ್ತು ಪ್ರಕಾಶ್ ರಾಜ್ ಸೇರಿ ನಾಲ್ವರಿಗೆ ವಿಚಾರಣೆಗೆ ಹಾಜರಾಗಲು ಜಾರಿ ನಿರ್ದೇಶನಾಲಯ (ಇಡಿ)ದ ಅಧಿಕಾರಿಗಳು ಸಮನ್ಸ್ ಜಾರಿ ಮಾಡಿದ್ದಾರೆ.

ಜುಲೈ 23 ರಂದು ದಗ್ಗುಬಾಟಿ, ಜುಲೈ 30 ರಂದು ಪ್ರಕಾಶ್ ರಾಜ್, ಆಗಸ್ಟ್ 6 ರಂದು ವಿಜಯ್ ದೇವರಕೊಂಡ ಮತ್ತು ಆಗಸ್ಟ್ 13 ರಂದು ಲಕ್ಷ್ಮಿ ಮಂಚು ಅವರು ಕೇಂದ್ರೀಯ ಸಂಸ್ಥೆಯ ಮುಂದೆ ಹಾಜರಾಗುವಂತೆ ತಿಳಿಸಲಾಗಿದೆ. ಹೆಸರಿಸಲಾದ ಇತರರಿಗೆ ಸಂಸ್ಥೆಯು ಹಂತ ಹಂತವಾಗಿ ಸಮನ್ಸ್ ಜಾರಿ ಮಾಡುವುದನ್ನು ಮುಂದುವರಿಸುತ್ತದೆ.

ಪ್ರಣೀತಾ ಸುಭಾಷ್, ನಿಧಿ ಅಗರ್ವಾಲ್, ಅನನ್ಯ ನಾಗಲ್ಲ, ಸಿರಿ ಹನುಮಂತ್, ಶ್ರೀಮುಖಿ, ವರ್ಷಿಣಿ ಸೌಂದರರಾಜನ್, ವಸಂತಿ ಕೃಷ್ಣನ್, ಶೋಭಾ ಶೆಟ್ಟಿ, ಅಮೃತಾ ಚೌಧರಿ, ನಯನಿ ಪಾವನಿ, ನೇಹಾ ಪಠಾಣ್, ಪಾಂಡು, ಪದ್ಮಾವತಿ, ಇಮ್ರಾನ್ ಖಾನ್, ವಿಷ್ಣು ಪ್ರಿಯಾ, ಹರ್ಷ ಸಾಯಿ, ಇಮ್ರಾನ್ ಖಾನ್ ಸೇರಿದಂತೆ ಹಲವರಿಗೆ ಈಗಾಗಲೇ ನೋಟೀಸ್ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಇವರ ವಿಚಾರಣೆ ನಡೆಸುತ್ತಾರೆ.



**ಪ್ರಕರಣದ ವಿವರ:** ಅಕ್ರಮ ಬೆಟ್ಟಿಂಗ್ ಆಪ್ ಪ್ರಚಾರ ಮಾಡಿದ್ದಕ್ಕಾಗಿ ಜಾರಿ ನಿರ್ದೇಶನಾಲಯವು ಹಲವಾರು ಸೆಲೆಬ್ರಿಟಿಗಳು ಮತ್ತು ಸಾಮಾಜಿಕ ಮಾಧ್ಯಮ ಪ್ರಭಾವಿಗಳ ವಿರುದ್ಧ ಪ್ರಕರಣ ದಾಖಲಿಸಿದೆ. ತೆಲಂಗಾಣ ಮತ್ತು ಆಂಧ್ರಪ್ರದೇಶದಲ್ಲಿ ರಾಜ್ಯ ಪೊಲೀಸರು ದಾಖಲಿಸಿರುವ ಕನಿಷ್ಠ ಐದು ಎಫ್‌ಐಆರ್‌ಗಳ ಆಧಾರದ ಮೇಲೆ ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್ಎ) ಅಡಿಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಮೂಲಗಳು ತಿಳಿಸಿವೆ.

ಹಣ ಗಳಿಸುವ ಆಸೆ ತೋರಿಸಿ ಯುವ ಜನತೆಯನ್ನು ಬೆಟ್ಟಿಂಗ್ ಆಪ್‌ಗಳು ದಾರಿ ತಪ್ಪಿಸುತ್ತಿವೆ. ಇದಕ್ಕೆ ಅನೇಕ ಸೆಲೆಬ್ರಿಟಿಗಳು ಮತ್ತು ಮಿಲಿಯನ್‌ಗಟ್ಟಲೆ ಫಾಲೋವರ್ಸ್ ಹೊಂದಿರುವ ವ್ಯಕ್ತಿಗಳು ಪ್ರಚಾರ ನೀಡುತ್ತಿದ್ದಾರೆ. ಇಂತಹ ಅಕ್ರಮ ಬೆಟ್ಟಿಂಗ್ ಆಪ್‌ಗಳಿಂದ ಅನೇಕ ಯುವಕರು ಹಣ ಕಳೆದುಕೊಂಡಿದ್ದಾರೆ ಎಂದು ಇಡಿ ವಾದಿಸಿದೆ.

**ಗೂಗಲ್ ಮೆಟಾಗೂ ನೋಟಿಸ್:** ಬೆಟ್ಟಿಂಗ್ ಆಪ್‌ಗಳಿಗೆ ವೇದಿಕೆ ಮತ್ತು ಪ್ರಚಾರ ಕಲ್ಪಿಸಿದ ಗೂಗಲ್ ಮತ್ತು ಮೆಟಾ ಸಂಸ್ಥೆಗಳಿಗೆ ಜು.28ಕ್ಕೆ ಹಾಜರಾಗುವಂತೆ ಮತ್ತೊಮ್ಮೆ ಸಮನ್ಸ್ ಜಾರಿಗೊಳಿಸಲಾಗಿದೆ. ಹಲವು ಆನ್‌ಲೈನ್ ವೇದಿಕೆಗಳು ಅಕ್ರಮ ಬೆಟ್ಟಿಂಗ್ ಹಾಗೂ ಜೂಜಾಟದ ಆಪ್‌ಗಳಿಗೆ ಜಾಹೀರಾತು, ಡೌನ್‌ಲೋಡ್ ಲಿಂಕ್ ಸೇರಿ ಹಲವು ಮಾರ್ಗಗಳಲ್ಲಿ ನೆರವು ಒದಗಿಸಿವೆ ಎಂದು ಜಾರಿ ನಿರ್ದೇಶನಾಲಯ ಹೇಳಿತ್ತು

# ಜಿಲ್ಲಾ ಸರ್ವೋತ್ತಮ ಸೇವಾ ಪ್ರಶಸ್ತಿ ವಿಜೇತ ಖಡಗೆಕರಗೆ ಸನ್ಮಾನ



**ಚಡಚಣ :ಜು.22–** ಚಡಚಣ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸಂಜಯ. ಖಡಗೇಕರ ಅವರ ದಕ್ಷ ಹಾಗೂ ಪ್ರಾಮಾಣಿಕ ಸೇವೆಗೆ ವಿಜಯಪುರ ಜಿಲ್ಲಾ ಸರ್ವೋತ್ತಮ ಸೇವಾ ಪ್ರಶಸ್ತಿ ಲಭಿಸಿದೆ.

ಈ ಸಂದರ್ಭದಲ್ಲಿ ಚಡಚಣ ಸರಕಾರಿ ಸಂಘದ ಅಧ್ಯಕ್ಷ ಬಸವರಾಜ. ಮಜ್ಜಗಿ, ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ವಿಠ್ಠಲ. ಕಾಂಬಳೆ, ಚಡಚಣ ತಾಲೂಕ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎ ಎಸ್ ಸೋನಗಿ, ಪ್ರಧಾನ ಕಾರ್ಯದರ್ಶಿ ಬಸವಂತ ಉಮರಾಣಿ, ತಾಲೂಕ ಪ್ರಾಥಮಿಕ ಶಾಲಾ ಶಿಕ್ಷಕರ ಪತ್ತಿನ ಸಂಘದ ಅಧ್ಯಕ್ಷ ಎಸ್ ಎಸ್ ಪಾಟೀಲ ಅವರು ಚಡಚಣ ತಾಲೂಕಿನ ಸಮಸ್ತ ನೌಕರರ ಪರವಾಗಿ ಸನ್ಮಾನಿಸಿ ಅಭಿನಂದಿಸಿದರು.

# ಒಳಮೀಸಲಾತಿ ಜಾರಿಗೆ ಗಡುವು:ಇಲ್ಲದಿದ್ದರೆ ರಾಜ್ಯಾದ್ಯಂತ ಹೋರಾಟ

**ಬೆಂಗಳೂರು, ಜು. 22–** ಪರಿಶಿಷ್ಟ ಜಾತಿಯ ಒಳಮೀಸಲಾತಿಯನ್ನು ಬರುವ ಆಗಸ್ಟ್ 1 ರೊಳಗೆ ರಾಜ್ಯ ಸರ್ಕಾರ ಜಾರಿ ಮಾಡಬೇಕು. ಇಲ್ಲದಿದ್ದರೆ ರಾಜ್ಯಾದ್ಯಂತ ಹೋರಾಟ ನಡೆಸುವುದಾಗಿ ಮಾದಿಗ ಸಂಘಟನೆಗಳ ಒಕ್ಕೂಟ ಎಚ್ಚರಿಕೆ ನೀಡಿದೆ.

ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿಂದು ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ಸಂಸದ ಗೋವಿಂದ ಕಾರಜೋಳ ಹಾಗೂ ಕೇಂದ್ರದ ಮಾಜಿ ಸಚಿವ ಎ. ನಾರಾಯಣಸ್ವಾಮಿ ಅವರು ರಾಜ್ಯ ಸರ್ಕಾರ ಒಳ ಮೀಸಲಾತಿ ಜಾರಿ ಮಾಡದಿದ್ದರೆ ಆಗಸ್ಟ್ 1 ರಿಂದ ರಾಜ್ಯ ಎಲ್ಲ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಬೃಹತ್ ಪ್ರತಿಭಟನೆ ನಡೆಸುವುದಾಗಿ ಹೇಳಿದರು.ಆಗಸ್ಟ್ 1ಕ್ಕೆ ನ್ಯಾ. ಚಂದ್ರಚೂಡ್ ಅವರು ಒಳಮೀಸಲಾತಿ ಜಾರಿ ತೀರ್ಪು ಕೊಟ್ಟು ಒಂದು ವರ್ಷ ಆಗಲಿದೆ. ರಾಜ್ಯ ಸರ್ಕಾರ ಒಳ ಮೀಸಲಾತಿ ಜಾರಿ ಮಾಡದಿದ್ದರೆ ಮುಂದಿನ ದಿನಗಳಲ್ಲಿ ಕರ್ನಾಟಕ ಬಂದ್‌ನ್ನು ನಡೆಸುತ್ತೇವೆ ಎಂದು ಹೇಳಿದರು.ರಾಜ್ಯಾದ್ಯಂತ ಅಸಹಕಾರ ಚಳವಳಿಯನ್ನು ಸಂಘಟಿಸುತ್ತೇವೆ. ಸರ್ಕಾರ ನಡೆಸಲು ಬಿಡುವುದಿಲ್ಲ ಎಂದು ಅವರು ಎಚ್ಚರಿಸಿದರು.

ಒಳಮೀಸಲಾತಿಗಾಗಿ ಮಾದಿಗ ಸಂಘಟನೆಗಳು ಮೂರುವರೆ ದಶಕಗಳಿಂದ ಹೋರಾಟ ಮಾಡುತ್ತಿವೆ. ತೆಲಂಗಾಣದಲ್ಲಿ ಅಲ್ಲಿನ ಮುಖ್ಯಮಂತ್ರಿ ರೇವಂತರೆಡ್ಡಿ ಒಳಮೀಸಲಾತಿ ಜಾರಿಗೊಳಿಸಿದ್ದಾರೆ. ಆಂಧ್ರ, ಪಂಜಾಬ್‌ನಲ್ಲೂ ಇದು ಜಾರಿಯಾಗಿದೆ. ಆದರೆ ಕರ್ನಾಟಕ ಸರ್ಕಾರ ಮೀನಾಮೇಷ ಎಣಿಸುತ್ತಿದೆ ಎಂದು ದೂರಿದರು. ಬೆಳಗಾವಿಯಲ್ಲಿ 5 ತಿಂಗಳ ಹಿಂದೆ ಮಾದಿಗರು ಹೋರಾಟ ಮಾಡಿದಾಗ ಕೇವಲ 3 ತಿಂಗಳಲ್ಲಿ ಒಳ ಮೀಸಲಾತಿ ಜಾರಿ ಮಾಡುವ ಆಶ್ವಾಸನೆಯನ್ನು ಸರ್ಕಾರ ಕೊಟ್ಟಿತ್ತು. ಬಳಿಕ ನಾಗಮೋಹನದಾಸ್ ಆಯೋಗ ರಚಿಸಿ 40 ದಿನಗಳ ಗಡುವು ಕೊಟ್ಟಿದ್ದರು. ಮತ್ತೆ ಅವರು ಸಮಯ ಕೇಳಿದರು. ನಾಗಮೋಹನ್‌ದಾಸ್ ಅವರಿಗೆ ಈ ಸರ್ಕಾರ ಸಹಕಾರ ಕೊಟ್ಟಿಲ್ಲ ಎಂಬುದಕ್ಕೆ ನಮ್ಮಲ್ಲಿ ದಾಖಲೆಗಳಿವೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ನಡವಳಿಕೆ ಆಡಳಿತದ ಬಗ್ಗೆ ಸಂಶಯವಿದೆ. ಅಹಿಂದ ನಾಯಕ ಎಂದು ಹೇಳಿಕೊಂಡು ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ವರದಿಯನ್ನು ಅವರು ಜಾರಿ ಮಾಡಲಿಲ್ಲ. ಕಾಂಗ್ರೆಸ್ ಹೈಕಮಾಂಡ್ ಹೇಳಿದ್ದಕ್ಕೆ ವರದಿ ಜಾರಿಯನ್ನು ಕೈ ಬಿಟ್ಟರು ಎಂದು ಟೀಕಿಸಿದರು.



ಸರ್ಕಾರವು ಆಗಸ್ಟ್ 16 ರೊಳಗೆ ಒಳ ಮೀಸಲಾತಿ ಜಾರಿ ಮಾಡಬೇಕು. ಇಲ್ಲದಿದ್ದರೆ ಆ. 16 ರಿಂದ ಮಾಡು ಇಲ್ಲ ಮಡಿ ಹೋರಾಟ ಮತ್ತು ಅಸಹಕಾರ ಚಳವಳಿ ಮಾಡುತ್ತೇವೆ ಎಂದು ಸಂಸದ ಗೋವಿಂದ ಕಾರಜೋಳ ಹೇಳಿದರು.

ದಲಿತರ ಬಗ್ಗೆ ಅಭಿಮಾನವಿದ್ದರೆ ಬಿಜೆಪಿ ದಲಿತ ನಾಯಕರಾದ ಗೋವಿಂದಕಾರಜೋಳ ಅಥವಾ ಛಲವಾದಿ ನಾರಾಯಣಸ್ವಾಮಿಯವರನ್ನು ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಘೋಷಣೆ ಮಾಡಲಿ ಎಂಬ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಹೇಳಿಕೆಗೆ ಪ್ರತಿಕ್ರಿಯಿಸಿದ ಗೋವಿಂದ ಕಾರಜೋಳ ಅವರು, ಮುಖ್ಯಮಂತ್ರಿ ಈ ರೀತಿ ಹೇಳಿಕೆ ಕೊಟ್ಟಿರುವುದು ಸಂತೋಷ. ಈ ಹಿಂದೆ ನಾನು ಮತ್ತು ಸಿದ್ದರಾಮಯ್ಯ ಒಂದೇ ಪಕ್ಷದಲ್ಲಿದ್ದೆವು. ಆ ಅಭಿಮಾನಕ್ಕೆ ಈ ಮಾತು ಹೇಳಿರಬಹುದು. ಈಗ ಮುಖ್ಯಮಂತ್ರಿ ಮಾಡುವ ಅವಕಾಶ ಇರುವುದು ಕಾಂಗ್ರೆಸ್ ಪಕ್ಷಕ್ಕೆ. ಸಿದ್ದರಾಮಯ್ಯನವರು ತಮ್ಮ ಸ್ಥಾನವನ್ನು ದಲಿತರಿಗೆ ಬಿಟ್ಟು ಕೊಡಲಿ ಎಂದು ಹೇಳಿದರು.

ಕಾಂಗ್ರೆಸ್‌ನಲ್ಲಿ ದಲಿತರನ್ನು ಸಿಎಂ ಮಾಡಬೇಕು ಎಂಬ ಬೇಡಿಕೆ ಬಹಳ ದಿನಗಳಿಂದ ಇದೆ. ಮಲ್ಲಿಕಾರ್ಜುನ ಖರ್ಗೆಯವರೇ ಈಗ ಎಐಸಿಸಿ ಅಧ್ಯಕ್ಷರಾಗಿದ್ದಾರೆ. ಅವರು ಮನಸ್ಸು ಮಾಡಿ ದಲಿತರನ್ನು ಸಿಎಂ ಮಾಡಲಿ. ದಲಿತರ ಬಹುದಿನದ ಬೇಡಿಕೆ ಈಡೇರಿಸುವ ಸುವರ್ಣಾವಕಾಶ ಕಾಂಗ್ರೆಸ್ ಮುಂದಿದೆ ಎಂದರು.ಬಿಜೆಪಿಯಲ್ಲಿ ದಲಿತರನ್ನು ಸಿಎಂ ಅಭ್ಯರ್ಥಿಯಾಗಿ ಘೋಷಣೆ ಮಾಡುವ ವಿಚಾರ ಚುನಾವಣೆ ಬಂದಾಗ ನೋಡೋಣ. ಈಗ ಚುನಾವಣೆ ಸಂದರ್ಭ ಇಲ್ಲ. ಅಂತಹ ಸಂದರ್ಭ ಬಂದಾಗ ನಮ್ಮ ಹೈಕಮಾಂಡ್ ಈ ಬಗ್ಗೆ ತೀರ್ಮಾನ ಮಾಡುತ್ತದೆ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ರಾಜ್ಯ ವಕ್ತಾರ ವೆಂಕಟೇಶ್ ದೊಡ್ಡೇರಿ, ಹೂಡಿ ಮಂಜುನಾಥ್ ಮತ್ತಿತರರು ಉಪಸ್ಥಿತರಿದ್ದರು.

# ಗಣಿತಶಾಸ್ತ್ರದ ಮಹತ್ವದ ಸ್ಥಿರ ಚಿಹ್ನೆ ‘ಪೈ’

**ಕಲಬುರಗಿ:ಜು.22–** ಗಣಿತಶಾಸ್ತ್ರ ಕೇವಲ ಅದೊಂದು ವಿಷಯವಾಗಿರದೆ, ಜೀವನಕ್ಕೆತುಂಬಾ ಹತ್ತಿರವಾಗಿದೆ. ಲೆಕ್ಕಾಚಾರವಿಲ್ಲದ ಬದುಕು ಪರಿಪೂರ್ಣವಾಗಲಾರದು. ಗಣಿತ ಅಧ್ಯಯನ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾಗಿ ಕಾರ್ಯಮಾಡುತ್ತದೆ. ಪೈ ಒಂದು ಗಣಿತಶಾಸ್ತ್ರದ ಮಹತ್ವದ ಸ್ಥಿರ ಚಿಹ್ನೆಯಾಗಿದ್ದು, ಅದರ ಮೊತ್ತ 22/7 ಅಥವಾ 3.142 ಆಗಿದೆ. ಇದು ವೃತ್ತದ ಸುತ್ತಳತೆ ಮತ್ತು ವ್ಯಾಸದ ಅನುಪಾತವಾಗಿದೆ. ಇದನ್ನು ಗಣಿತಶಾಸ್ತ್ರಜ್ಞ ವಿಲಿಯಂ ಜೋನ್ಸ್ ವ್ಯಾಪಕವಾಗಿ ಬಳಸಿ, ಪ್ರಸಿದ್ಧಗೊಳಿಸಿದ್ದಾರೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ ಅಭಿಪ್ರಾಯಪಟ್ಟರು. ನಗರದ ನ್ಯೂ ರಾಘವೇಂದ್ರ ಕಾಲನಿಯಲ್ಲಿಬ ‘ಮುತ್ತಾ ಟ್ಯುಟೋರಿಯಲ್ಸ್’ನಲ್ಲಿ ‘ಬಸವೇಶ್ವರ ಸಮಾಜ ಸೇವಾ ಬಳಗ’ದ ವತಿಯಿಂದ ಜರುಗಿದ ‘ಪೈ ದಿನಾಚರಣೆ’ಯಲ್ಲಿ ಅವರು ಮಾತನಾಡುತ್ತಿದ್ದರು. ಗಣಿತ ಶಿಕ್ಷಕ ಶಿವಕುಮಾರ ಮುತ್ತಾ ಮಾತನಾಡಿ, ಗಣಿತ ಎನ್ನುವದು ಕಬ್ಬಿಣದ ಕಡಲೆಯಲ್ಲ. ಅದನ್ನು ತುಂಬಾ ಆಸಕ್ತಿಯಿಂದ ಅಧ್ಯಯನ ಮಾಡಿದರೆ ಸರಳವಾಗಿದೆ. ಇದರ ಬಗ್ಗೆ ವಿದ್ಯಾರ್ಥಿಗಳಲ್ಲಿ ಮೂಡಿರುವ ಭಯವನ್ನು ಶಿಕ್ಷಕರು ಮತ್ತು ಪಾಲಕರು ಹೋಗಲಾಡಿಸಬೇಕು. ಗಣಿತದಿಂದ ತಾರ್ಕಿಕ ಸಾಮಥ್ರ್ಯ ವೃದ್ಧಿಯಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಶಿಕ್ಷಕರಾದ ಗೌರಿ ಹಿರೇಮಠ, ವಿಶ್ವನಾಥ ನಂದರ್ಗಿ, ಆದರ್ಶ, ರಕ್ಷಿತಾ, ಭೀಮಾಶಂಕರ, ಗುರುರಾಜ ಹಾಗೂ ವಿದ್ಯಾರ್ಥಿಗಳಿದ್ದರು.

## ಎಐಬಿಎಎಸ್ ಜಿಲ್ಲಾ ಯುವ ಘಟಕಕ್ಕೆ ಅಧ್ಯಕ್ಷರಾಗಿ ಶಿವುಕುಮಾರ ಆಯ್ಕೆ



ಯುವ ಮಾರ್ಗ ಸುದ್ದಿ

**ಸಿರವಾರ, ಜು.22**–ಬಂಜಾರಾ ಸೇವಾ ಸಂಘದ, ರಾಯಚೂರು ಜಿಲ್ಲಾಯುವ ಘಟಕದ ಅಧ್ಯಕ್ಷರನ್ನಾಗಿ ಶಿವುಕುಮಾರ ದುರ್ಗಾನಾಯ್ಕ ತಾಂಡ ಇವರನ್ನು ನೇಮಕ ಮಾಡಿ ಆದೇಶಿಸಲಾಗಿದೆ. ಜಿಲ್ಲಾಧ್ಯಕ್ಷರ ಆದೇಶದ ಮೇರಿಗೆ ಜಿಲ್ಲೆಯಾದ್ಯಂತ ಪದಾಧಿಕಾರಿಗಳ ನೇಮಕ ಮಾಡಿ ರಾಜ್ಯಾಧ್ಯಕ್ಷರಿಗೆ ವರದಿ ನೀಡುವುದು, ಸದಸ್ಯತ್ವ ನೊಂದಣಿ ಮಾಡುವುದು ಮತ್ತು ಸಭೆ, ಸಮಾರಂಭ.ಸಮ್ಮೇಳನಗಿ 'ಳನ್ನು ಯಶಸ್ವಿಗೊಳಿಸುವುದು,

ಜನಾಂಗದವರಿಗೆ ಅನ್ಯಾಯವಾದಾಗ ನ್ಯಾಯ ದೊರಕಿಸುವ ದಿಶೆಯಲ್ಲಿ ಹೋರಾಡಲು ಆದೇಶಿಸಲಾಗಿದೆ. ತಕ್ಷಣ ಜಿಲ್ಲೆಯಲ್ಲಿ ಸಂಪರ್ಕ ಕಾರ್ಯಾಲಯ ಸ್ಥಾಪಿಸುವುದು. ಒಟ್ಟಿನಲ್ಲಿ ಸಮಾಜದ ಸರ್ವಾಂಗೀ ಅಭಿವೃದ್ಧಿಗೆ ಸದಸ್ಯತ್ವದ ಪಾತ್ರ ಮಹತ್ವದಾಗಿದೆ.ಈಹಿನ್ನೆಲೆಯಲ್ಲಿ ತಾವು ಮುಂದಾಗಬೇಕೆಂದು ಆದೇಶಿಸಿದೆ. ಎಲ್ಲರ ಜೊತೆಗೂಡಿ ಅವರ ವಿಶ್ವಾಸ ಪಡೆದು ಕಾರ್ಯೋನ್ಮುಖರಾಗಲು ಆದೇಶಿಸಲಾಗಿದೆ, ಸಂಘದ ವಿರುದ್ಧ ಹಾಗೂ ಸಂಘದ ಹೆಸರಲ್ಲಿ ಸಂಘಕ್ಕೆ ಸಮಾಜಕ್ಕೆ ಧಕ್ಕೆ ತರುವಂತಹ ಚಟುವಟಿಕೆಗಳನ್ನು ಸಂಘದಿಂದ ನಡೆಸಿದ್ದಲ್ಲಿ ಉಚ್ಚಾಟನೆ ಮಾಡಲಾಗುವದು. ತಮ್ಮ ಅಧಿಕಾರಾವಧಿ 3 ವರ್ಷ ಇರುತ್ತದೆ, ಎಂದು ರಾಜ್ಯಾದ್ಯಕ್ಷ ಪಾಂಡುರಂಗ ರಂಗ ಪಮ್ಮಾರ, ರಾಜ್ಯ ಯುವ ಘಟಕದ ಅಧ್ಯಕ್ಷ ವಿಜಯ ಜಾಧವ ತಿಳಿಸಿದ್ದಾರೆ


## ಜುಲೈ 30ರಂದು ಉದ್ದಿಮೆದಾರರ ಕಾರ್ಯಾಗಾರ

**ರಾಯಚೂರು,ಜು.22** –ಇಲ್ಲಿನ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ ಹಾಗೂ ಸ್ಥಳೀಯ ಕೈಗಾರಿಕಾ ಸಂಘಗಳ ಸಹಯೋಗದಲ್ಲಿ ಜುಲೈ 30ರ ಬೆಳಿಗ್ಗೆ 10.30ಕ್ಕೆ ನಗರದ ಸ್ಟೇಷನ್ ರಸ್ತೆಯ ರಂಜಿತಾ ಪ್ಯಾಲೇಸ್ ನಲ್ಲಿ ಎಂ.ಎಸ್.ಎಂ.ಇ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವುದು, ರಫ್ತು ಜಾಗೃತಿ ಹಾಗೂ ಲೀನ್ ಯೋಜನೆ ಮತ್ತು ಝಡ್ ಇ.ಡಿ. ಬಗ್ಗೆ ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯಲ್ಲಿರುವ ಆಸಕ್ತಿಯುಳ್ಳ ಎಂ.ಎಸ್.ಎಂ.ಇ. ಉದ್ದಿಮೆದಾರರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ರಾಯಚೂರು. ದೂರವಾಣಿ ಸಂಖ್ಯೆ: 8861241093ಗೆ ಕಚೇರಿಯ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಸಲು ನಾಳೆ ಕೊನೆಯ ದಿನ

**ರಾಯಚೂರು,ಜು.22**–ಸರ್ಕಾರದ ಯೋಜನೆಗಳು, ಸಾಧನೆಗಳ ಕುರಿತು ಬೀದಿ ನಾಟಕ, ಜಾನಪದ ಸಂಗೀತ ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ರಾಯಚೂರ ವಾರ್ತಾ ಇಲಾಖೆಯು ಬೀದಿನಾಟಕ, ಜಾನಪದ ಸಂಗೀತ ಕಲಾ ತಂಡಗಳಿಂದ ಅರ್ಜಿ ಆಹ್ವಾನಿಸಿದ್ದು ಅರ್ಜಿ ಸಲ್ಲಿಕೆಗೆ ಜುಲೈ 24 ಕೊನೆಯ ದಿನವಾಗಿದೆ. ರಾಯಚೂರು ಜಿಲ್ಲೆಯಿಂದ 3 ಬೀದಿನಾಟಕ ಹಾಗೂ 3 ಜಾನಪದ ಸಂಗೀತ ಕಲಾ ತಂಡಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಅರ್ಜಿಯನ್ನು ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, 1ನೇ ಮಹಡಿ, ಪತ್ರಿಕಾಭವನ, ರಂಗಮಂದಿರ ಹಿಂಭಾಗ, ರಾಯಚೂರು ಇಲ್ಲಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ: 9743892080, 9035063156ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವಾರ್ತಾಧಿಕಾರಿಗಳು ತಿಳಿಸಿದ್ದಾರೆ.

## ತಾಲೂಕು ವಕೀಲರ ಸಂಘದ ವತಿಯಿಂದ ತಹಸೀಲ್ದಾರ್ ಸನ್ಮಾನ



ಯುವ ಮಾರ್ಗ ಸುದ್ದಿ

**'ಮಾನ್ವಿ,ಜು.22**–ಪಟ್ಟಣದ ತಹಸೀಲ್ದರ್ ಕಚೇರಿಯಲ್ಲಿ ಪ್ರಭಾರಿ ತಹಸೀಲ್ದಾರ್ ರಿಂದ ಕಾಯಂ ತಹಸೀಲ್ದಾರ್‌ರಾಗಿ ನೇಮಕಗೊಂಡ ತಹಸೀಲ್ದಾರ್ ಭೀಮರಾಯ ರಾಮಸಮುದ್ರ ರವರಿಗೆ ತಾಲೂಕು ವಕೀಲರ ಸಂಘದ ವತಿಯಿಂದ ಸನ್ಮಾನಿಸಿ ಗೌರವಿಸಿ ತಾಲೂಕು ವಕೀಲರ ಸಂಘದ ಅಧ್ಯಕ್ಷರಾದ ರವಿಕುಮಾರ ಪಾಟೀಲ್ ಮಾತನಾಡಿ ರೈತರಿಗೆ ಹಾಗೂ ಸಾರ್ವಜನಿಕರಿಗೆ ಕಂದಾಯ ಇಲಾಖೆಯಿಂದ ದೊರೆಯುವ ಸೇವೆಗಳನ್ನು ಶೀಘ್ರದಲ್ಲಿ ದೊರೆಯುವಂತೆ ಕ್ರಮ ಕೈಗೊಳ್ಳಿ ಹಾಗೂ ಕಂದಾಯ ಪ್ರಕರಣಗಳನ್ನು ಕಾಲ ಮಿತಿಯಲ್ಲಿ ಇತ್ಯರ್ಥ ಪಡಿಸುವ ಮೂಲಕ ರೈತರಿಗೆ ಅನುಕುಲ ಮಾಡಿಕೊಡುವಂತೆ ಕೋರಿದರು.ವಕೀಲರಾದ ನಾಗರಾಜ ಭಂಡರಿ ಅನೀಲ್ ಕುಮಾರ ಹೊನ್ನಟಗಿ ಸುದರ್ಶನ,ಸಿದ್ದಪ್ಪ ಬ್ಯಾಗವಾಟ ಇದ್ದರು.

# ಸೌಂದರ್ಯ, ಆರೋಗ್ಯ ತಿಳುವಳಿಕೆ ಅತ್ಯಾವಶ್ಯಕ: ವಲಿಬಾಬು

ಯುವ ಮಾರ್ಗ ಸುದ್ದಿ

**ಮಾನ್ವಿ,ಜು.22**–ಇಂದಿನ ಮತ್ತು ಮಕ್ಕಳು ಮತ್ತು ಯುವ ಪೀಳಿಗೆಗೆ ಸೌಂದರ್ಯ ಮತ್ತು ಆರೋಗ್ಯದ ನಿರ್ವಹಣೆ ಕುರಿತು ಜಾಗೃತಿ ಅವಶ್ಯಕ ವಾಗಿದೆ ಎಂದು ಪೋತ್ನಾಳ್ ಸರ್ಕಾರಿ ಪ್ರೌಢಶಾಲೆ ಮುಖ್ಯ ಗುರು ವಲಿಬಾಬು ಹೇಳಿದರು.

ತಾಲೂಕಿನ ಪೋತ್ನಾಳ್ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ಸೌಂದರ್ಯ ಮತ್ತು ಆರೋಗ್ಯ ಪ್ರಯೋಗಾಲಯವನ್ನು ಉದ್ಘಾಟಿಸಿ ಮಾತ ನಾಡಿ ಸೌಂದರ್ಯ ಮತ್ತು ಆರೋಗ್ಯ ಒಂದಕ್ಕೊಂದು ಸಂಬಂಧ ಹೊಂದಿವೆ. ಮಕ್ಕಳು ಪ್ರೌಢಾವಸ್ಥೆಯಲ್ಲಿ ದೃಹಿಕವಾಗಿ ಹಾಗು ಮಾನಸಿಕವಾಗಿ ಬದಲಾವಣೆ ಹೊಂದುತ್ತಿರುತ್ತಾರೆ ಅದ್ದರಿಂದ ಈ ವಯಸ್ಸಿನಲ್ಲಿ ಸೌಂದರ್ಯ



ಮತ್ತು ಅರೋಗ್ಯವನ್ನು ಕಾಪಾ ಡಿಕೊಳ್ಳುವುದು ಮುಖ್ಯ ಎಂದರು. ಈ ಪ್ರಯೋಗಾಲಯದಲ್ಲಿ ಮಕ್ಕಳು ಚರ್ಮ ರೋಗ, ಕೂದಲು, ಆಹಾರ ಸೇವನೆ, ಮೊಡವೆ, ಮೇಕಪ್ ಕಲೆ, ಯೋಗ, ವ್ಯಾಯಾಮ, ದ್ಯಾನ, ಮಾನಸಿಕ ಸ್ಥಿರತೆ ಕಾಯ್ದುಕೊಳ್ಳುವುದು ಸೇರಿದಂತೆ ಅನೇಕ ವಿಷಯಗಳನ್ನು ಕಲಿಯಲಿದ್ದಾರೆ. ಉತ್ಸಾಹ ಹೆಚ್ಚಾಗಲಿದೆ. ಮುಂದಿನ ದಿನಗಳಲ್ಲಿ ಒತ್ತಡ ನಿಯಂತ್ರಣ ಹಾಗು ವೃತ್ತಿಪರ ಕೋರ್ಸ್ಗಳನ್ನು ಕಲಿಯಲು ಇದು ಸಹಾಯಕವಾಗಲಿದ್ದು, ಈ ನಿಟ್ಟಿನಲ್ಲಿ ಶಾಲೆಗಳಲ್ಲಿ ಈ ರೀತಿಯ ಪ್ರಯೋಗಾಲಯಗಳು ತೆರೆಯುವುದರಿಂದ ಮಕ್ಕಳಲ್ಲಿ ಜಾಗೃತಿ ಮೂಡುತ್ತದೆ ಎಂದರು.

ಕಾರ್ಯಕ್ರಮವನ್ನು ಪಿಯು ವಿಭಾಗದ ಪ್ರಾಚಾರ್ಯ ಶಂಕರ್ ಉಧ್ಘಾಟಿಸಿದರು. ಎಸ್‌ಡಿಎಂಸಿ ಅಧ್ಯಕ್ಷ ಸೈಫ್ ಅಲಿ, ಸದಸ್ಯರಾದ ಬಸವರಾಜ, ಶಿಕ್ಷಕರಾದ ಬಾಷಾ, ಚಂದ್ರಕಲಾ, ಚಂದ್ರಶೇಖರ್, ಉಮಾದೇವಿ, ಮುದುಕಪ್ಪ, ವಿರೇಶ, ನೀಲಮ್ಮ, ಲಕ್ಷ್ಮೀ, ಅಶ್ವಿನಿ, ಸರೋಜಮ್ಮ, ರಾಧಾ, ಶಹನಾಜ್ ಬೇಗಂ, ಶಶಿಕುಮಾರ, ಅಮರೇಶ, ಬುಡ್ಡಪ್ಪ, ಅನುಷಾ, ಶಿವಲೀಲಾ ಇದ್ದರು.

# ಖರ್ಗೆಯವರು ಪ್ರಧಾನ ಮಂತ್ರಿ ಸ್ಥಾನ ದೊರೆಯಲಿ: ಚನ್ನಪ್ಪಗಡ್ಲ



ಯುವ ಮಾರ್ಗ ಸುದ್ದಿ

**ಸಿರವಾರಜು.22**– ಅಭಿವೃದ್ಧಿಗೆ, ಪಕ್ಷ ನಿಷ್ಠೆಗೆ ಮತ್ತೊಂದು ಹೆಸರು ಮಲ್ಲಿಕಾರ್ಜುನ ಖರ್ಗೆಯವರು,ಆದರೆ ಅವರ ಅನುಭವ, ಹಿರೆತನಕ್ಕೆ ತಕ್ಕಂತೆ ಸ್ಥಾನ ಮಾನ ಸಿಗದೆ ಇರುವುದು ದುಃಖದ ವಿಷಯ, ಮುಂದಿನ ದಿನಗಳಲ್ಲಿ ದೇಶದ ಪ್ರಧಾನ ಮಂತ್ರಿಯಾಗಲಿ ಎಂದು ಹಾರೈಸುತ್ತೇನೆ ಎಂದು ಪ.ಪಂಚಾಯತಿ ಮಾಜಿ ಉಪಾದ್ಯಕ್ಷ ಚನ್ನಪ್ಪ ಗಡ್ಲ ಹೇಳಿದರು.

ಎಐಸಿಸಿ ಅಧ್ಯಕ್ಷರು, ರಾಜ್ಯಸಭೆ ವಿರೋಧ ಪಕ್ಷದ ನಾಯಕರೂ ಆದ ಮಲ್ಲಿಕಾರ್ಜುನ ಖರ್ಗೆಯವರ 83 ನೇ ಹುಟ್ಟುಹಬ್ಬದ ಅಂಗವಾಗಿ ಸಿರವಾರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಖರ್ಗೆ ಅಭಿಮಾನಿ ಬಳಗದಿಂದ ಹಣ್ಣು – ಹಂಪಲು ವಿತರಣೆ ಮಾಡಲಾಯಿತು ನಂತರ ಮಾತನಾಡಿದ ಅವರು, ಖರ್ಗೆಯವರು ಮತ್ತು ಮಾಜಿ ಮುಖ್ಯಮಂತ್ರಿ ಧರ್ಮಸಿಂಗ್ ಕ.ಕರ್ನಾಟಕ ಭಾಗಕ್ಕೆ ಎರಡು ಕಣ್ಣುಗಳಾಗಿದ್ದರು. ಇಬ್ಬರು ಒತ್ತಾಯದ ಸಂವಿಧಾನದ ಕಲಂ 371 (ಜೆ) ಜಾರಿಗೊಳಿಸಿದ್ದಕ್ಕಾಗಿ ಈ ನಾಡಿನ ಜನರು ಎಂದಿಗೂ ಮರೆಯಲಾರರು.ಡಾ. ಮನಮೋಹನ್‌ಸಿಂಗ್ ನೇತೃತ್ವದ ಯುಪಿಎ ಸರ್ಕಾರವು ಮಿತ್ರ ಪಕ್ಷಗಳ ಸಹಕಾರದೊಂದಿಗೆ ಅಧಿಕಾರದಲ್ಲಿದ್ದ ಸಂದರ್ಭ. ಶೈಕ್ಷಣಿಕವಾಗಿ, ಆರ್ಥಿಕವಾಗಿ ಹಿಂದುಳಿದ ಕಲ್ಯಾಣ ಕರ್ನಾಟಕ ಭಾಗಕ್ಕೆ ವಿಶೇಷ ಸ್ಥಾನಮಾನ ಕೊಡಿಸಲು ಸಂವಿಧಾನ ತಿದ್ದುಪಡಿ ಮಾಡಬೇಕಿತ್ತು. ಅದಕ್ಕೆ ಮೂರನೇ ಎರಡರಷ್ಟು ಬಹುಮತ ಬೇಕಿತ್ತು. ತಮ್ಮ ಜನರನ್ನು ಆರ್ಥಿಕವಾಗಿ, ಶೈಕ್ಷಣಿಕವಾಗಿ ಮೇಲೆತ್ತಲು ಪಣ ತೊಟ್ಟಿದ್ದ ಖರ್ಗೆ – ಧರ್ಮಸಿಂಗ ಅವರು ಪ್ರತಿಯೊಬ್ಬ ಸಂಸದರು, ಮಿತ್ರ ಪಕ್ಷ, ವಿರೋಧ ಪಕ್ಷಗಳ ಕಚೇರಿಗಳಿಗೆ ತೆರಳಿ 371 (ಜೆ) ಕಲಂ ಜಾರಿಗೊಳ್ಳಬೇಕಾದ ಅಗತ್ಯವನ್ನು ಒತ್ತಿ ಹೇಳಿದ್ದರು. ಅದರ ಪರಿಣಾಮವಾಗಿಯೇ ಸಂಸತ್ತು ಬಹುಮತದ ಮೂಲಕ ಅನುಮೋದನೆ ನೀಡಿತು. ಅದರ ಪ್ರತಿಫಲ ನಮ್ಮೆಲ್ಲರ ಮುಂದೆಯೇ ಇದೆ.

ಪ್ರತಿ ವರ್ಷ ಸಾವಿರಾರು ಎಂಬಿಬಿಎಸ್, ಎಂಜಿನಿಯರಿಂಗ್, ಫಾರ್ಮಸಿ ಸೇರಿದಂತೆ ವೃತ್ತಿಪರ ಶಿಕ್ಷಣ ಹಾಗೂ ಉನ್ನತ ಶಿಕ್ಷಣದಲ್ಲಿ ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ಮೀಸಲಾತಿ ಸಿಗುತ್ತಿದೆ. ರಾಜ್ಯ ಸರ್ಕಾರ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಮೂಲಕ ಅಭಿವೃದ್ಧಿಗಾಗಿ ಸಾವಿರಾರು ಕೋಟಿ ಹಣದ ಹೊಳೆಯನ್ನೇ ಹರಿಸುತ್ತಿದೆ. ಇದೆಲ್ಲದರ ಶ್ರೇಯ ನಿಸ್ಸಂದೇಹವಾಗಿ ಇಬ್ಬರು ನಾಯಕರಿಗೆ ಸಲ್ಲಬೇಕು. ಸೋಲಿಲದ ಸರದಾರನಾಗಿದ್ದರೂ, ಕೆಪಿಸಿಸಿ ಅಧ್ಯಕ್ಷರಾಗಿದ್ದರೂ, ಮುಖ್ಯಮಂತ್ರಿ ಸ್ಥಾನ ದೊರೆಯದೆ ವಂಚಿತರಾಗಿದರೂ ಸಹ ಪಕ್ಷ ಬಿಡದೆ ಪಕ್ಷದ ಏಳ್ಗೆಗಾಗಿ ಶ್ರಮಿಸಿದರು ಮುಂದೆ ಪ್ರಧಾನ ಮಂತ್ರಿ ಸ್ಥಾನ ದೊರೆಯಲಿ ಎಂದರು. ಛಲವಾದಿ ಸಮಾಜದ ಮುಖಂಡ ಹನುಮಂತ ಮಾತನಾಡಿ ಮಲ್ಲಿಕಾರ್ಜುನ ಖರ್ಗೆಯವರು ರಾಷ್ಟ್ರೀಯ ನಾಯಕರಾಗಿದ್ದಾರೆ. ಒಬ್ಬ ಸಾಮನ್ಯ ಜಿ.ಪಂ, ತಾ.ಪಂ ಸದಸ್ಯರ ಹುಟ್ಟುಹಬ್ಬದ ಅದ್ದೂರಿಯಾಗಿ ಆಚರಣೆ ಮಾಡುತ್ತಾರೆ, ಆದರೆ ಖರ್ಗೆಯವರು ದಲಿತರು, ಅಶ್ಪೃಶ್ಯರಯ ಎಜದು ತಳಿದು ಪಕ್ಷದವರು ಹುಟ್ಟುಹಬ್ಬ ಆಚರಣೆ ಮಾಡದೆ ನಿರ್ಲಕ್ಷ್ಯ ಮಾಡಿದ್ದಾರೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಡಾ.ಸುನೀಲ್ ಸರೋದೆ,ಪ.ಪಂಚಾಯತಿ ಸದಸ್ಯ ಮಾರ್ಕಪ್ಪ, ಕನ್ನಡ ಸೇನೆ ಕರ್ನಾಟಕ ತಾಲೂಕ ಅದ್ಯಕ್ಷ ವೇಂಕಟೇಶ ದೊರೆ, ಚಂದ್ರಶೇಖರ ಹಡಪದ್, ಲಂಕೇಶ ಮರಾಟ, ಮಲ್ಲಯ್ಯ ಆಟೋ,ಗುರಪ್ಪ, ರಮೇಶ ಛಲವಾದಿ,ತಿಮ್ಮಮರಾಟ, ರಾಜ ಭೋವಿ, ಹನುಮೇಶ ಛಲವಾದಿ, ಶಂಕರ, ರವಿ, ಬಾಲಪ್ಪ ಇನ್ನಿತರರು ಇದರು

# ಮಾವಿನಕೆರೆಗೆ ಜಿಲ್ಲಾಧಿಕಾರಿಗಳು, ಪಾಲಿಕೆಯ ಆಯುಕ್ತರು ಭೇಟಿ

ಯುವ ಮಾರ್ಗ ಸುದ್ದಿ

**ರಾಯಚೂರು,ಜು.22**–ನಗರದ ಮಾವಿನಕೆರೆ ಪ್ರದೇಶಕ್ಕೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಹಾಗೂ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಜುಲೈ 21ರಂದು ಭೇಟಿ ನೀಡಿ ಪರಿಶೀಲಿಸಿದರು.

ಇದೆ ವೇಳೆ ಅವರು, ಕೆರೆ ಅಭಿವೃದ್ಧಿ ಕಾಮಗಾರಿಯ ವೀಕ್ಷಣೆ ನಡೆಸಿದರು. ಮಾವಿನಕೆರೆಗೆ ಬೇರೆ ಬೇರೆ ಕಡೆಗಳಿಂದ ಗಟಾರು ನೀರು ಹರಿದು ಬಂದು ಕೆರೆಯ ನೀರು ಕಲುಷಿತವಾಗುತ್ತಿದೆ ಎಂದು ಸಾರ್ವಜನಿಕರು ದೂರುತ್ತಿರುವ ಹಿನ್ನೆಲೆಯಲ್ಲಿ ಗಟಾರು ನೀರು ಕೆರೆಗೆ ಹರಿಯದೇ ಬೇರೆಡೆ ಸಾಗಿಸುವ ಬಗ್ಗೆ ಇದೆ ವೇಳೆ ಚರ್ಚಿಸಲಾಯಿತು.



ಸಾರ್ವಜನಿಕರು ಕೆರೆಗೆ ಕಸ ಮತ್ತು ಪ್ಲಾಸ್ಟಿಕ್ ಎಸೆಯದಂತೆ ಕೆರೆಯ ಸುತ್ತಲು ಕಾವಲು ವ್ಯವಸ್ಥೆಯನ್ನು ಸಿಬ್ಬಂದಿಯ ಮೂಲಕ ಖಾಯಂಗೊಳಿಸುವುದರ ಬಗ್ಗೆ ಸಹ ಇದೆ ವೇಳೆ ಚರ್ಚಿಸಲಾಯಿತು. ಇದೆ ವೇಳೆ ಮಹಾನಗರ ಪಾಲಿಕೆಯ ಅಧಿಕಾರಿಗಳು ಮತ್ತು ಇನ್ನೀತರರು ಇದ್ದರು.

## ಯರಗೇರಾ ಗ್ರಾಮಕ್ಕೆ ಜಿಪಂ ಸಿಇಓ ಭೇಟಿ: ಜೆಜೆಎಂ ಕಾಮಗಾರಿ ಪರಿಶೀಲನೆ



ಯುವ ಮಾರ್ಗ ಸುದ್ದಿ

**ರಾಯಚೂರು,ಜು.22**– ರಾಯಚೂರು ತಾಲೂಕಿನ ಯರಗೇರಾ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಗ್ರಾಮಸ್ಥರಿಗೆ ಜಲಜೀವನ್ ಮೀಷನ್ ಯೋಜನೆಯಡಿ ಆಗಸ್ಟ್ 02ರೊಳಗೆ ಗ್ರಾಮದ ಪ್ರತಿ ಮನೆಮನೆಗೆ ನಳದ ನೀರು ಸಂಪರ್ಕ ಕಲ್ಪಿಸಲು ಅಗತ್ಯ ಕ್ರಮ ಜರುಗಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕಾಂದೂ ಅವರು ನಿರ್ದೇಶನ ನೀಡಿದರು.

ಮಂಗಳವಾರ ಯರಗೇರಾ ಗ್ರಾಮಕ್ಕೆ ಭೇಟಿ ನೀಡಿ ಗ್ರಾಮದಲ್ಲಿ ಅನುಷ್ಠಾನ ಮಾಡಿರುವ ಜಲಜೀವನ್ ಮೀಷನ್ ಯೋಜನೆಯ ಕಾಮಗಾರಿ ವೀಕ್ಷಣೆ ನಡೆಸಿ ಅವರು ಮಾತನಾಡಿದರು.

ನಳದ ಸಂಪರ್ಕವನ್ನು ಎಲ್ಲಾ ಮನೆಗಳಿಗೆ ಸರಿಯಾಗಿ ಕಲ್ಪಿಸಬೇಕು. ದೊಡ್ಡ ನಳ ಹಾಗೂ ಗುಣಮಟ್ಟ ನಳಗಳನ್ನು ಅಳವಡಿಸಬೇಕು ಎಂದು ಏಜೆನ್ಸಿಯವರಿಗೆ ಹಾಗೂ ಜೆಇ ಅವರಿಗೆ ಇದೆ ವೇಳೆ ಸಿಇಓ ಅವರು ನಿರ್ದೇಶನ ನೀಡಿದರು. ಮುಂದಿನ 10 ದಿನದೊಳಗಾಗಿ ಸಂಪೂರ್ಣವಾಗಿ ಅಂದಾಜು ಪಟ್ಟಿ ಪ್ರಕಾರ ಕೆಲಸ ಅನುಷ್ಠಾನವಾಗಬೇಕು. 200 ಮನೆಗಳು ಹೆಚ್ಚುವರಿ ಇದ್ದರೆ ಅದನ್ನು ಪರಿಶೀಲಿಸಿ ಸೂಕ್ತ ಕ್ರಮವಹಿಸಬೇಕು ಎಂದು ಸಹಾಯಕ ಅಭಿಯಂತರರಿಗೆ ನಿರ್ದೇಶನ ನೀಡಿದರು. ಇದನ್ನು ಪರಿಶೀಲಿಸಿ ಹಸ್ತಾಂತರ ಮಾಡಿಕೊಳ್ಳಬೇಕೆಂದು ಪಿಡಿಓ ಅವರಿಗೆ ಸೂಚಿಸಿದರು. ಇದು ಯಾವುದೇ ಕಾರಣಕ್ಕೂ ವಿಳಂಬವಾಗಬಾರದು ಎಂದರು.

ಗ್ರಾಮದಲ್ಲಿ ಎಷ್ಟು ವಾರ್ಡಗಳಿವೆ. ಎಫ್.ಟಿ.ಕೆ ಕಿಟ್ ಮುಖಾಂತರ ಎಷ್ಟು ನೀರಿನ ಮೂಲಗಳನ್ನು ಪರೀಕ್ಷೆ ಮಾಡಿಸಿದ್ದೀರಿ ಎಂದು ಇದೆ ವೇಳೆ ಸಿಇಓ ಅವರು ಪಿಡಿಓ ಅವರಿಗೆ ಪ್ರಶ್ನಿಸಿದರು. 15 ದಿನಗಳ ಹಿಂದೆ ಎಫ್.ಟಿ.ಕೆ ಕಿಟ್ ಮೂಲಕ ಪರೀಕ್ಷೆ ಮಾಡಿಸಿದ್ದೇವೆ. ಜೆಜೆಎಮ್ ಟ್ರಯಲ್ ರನ್ ಆಗಿಲ್ಲ. ಜೆಜೆಎಮ್ ಪೈಪಲೈನ್ ಮೂಲಕ ನೀರು ಹೋಗುವುದಿಲ್ಲ. ಹಳೆ ಪೈಪಲೈನ್ ಮೂಲಕ ನೀರು ಸರಬರಾಜು ಅಗುತ್ತಿದೆ ಎಂದು ಪಿಡಿಓ ಪ್ರತಿಕ್ರಿಯಿಸಿದರು.

ಪಿಡಿಓ, ಜೆಇಗೆ ಎಚ್ಚರಿಕೆ: ಕೆಲವೊಂದು ಏರಿಯಾಗಳಲ್ಲಿ ಮಾತ್ರ ಟ್ರಯಲ್ ರನ್ ಮಾಡಿದ್ದೇವೆ ಎಂದು ಜೆಇ ದೊಡ್ಡಬಸಪ್ಪ ತಿಳಿಸಿದರು. ತಾವುಗಳು ನೀಡುವ ಮಾಹಿತಿಯಲ್ಲಿ ವ್ಯತ್ಯಾಸ ಕಾಣಿಸುತ್ತಿದೆ. ಪಿಡಿಓ ಮತ್ತು ಜೆಇ ನಡುವೆ ಸಮನ್ವಯ ಇರುವುದಿಲ್ಲ ಎಂಬುದು ಕಂಡು ಬರುತ್ತಿದೆ. ಇದು ಸರಿಯಲ್ಲ. ಪರಸ್ಪರ ಸಮನ್ವಯದಿಂದ ಕೆಲಸ ಮಾಡಬೇಕು ಎಂದು ಇದೆ ವೇಳೆ ಸಿಇಓ ಅವರು ಎಚ್ಚರಿಕೆ ನೀಡಿದರು.

ವಾರದ ಗಡುವು: ಒಂದು ವರ್ಷವಾದರೂ ಜೆಜೆಎಮ್ ಕಾಮಗಾರಿಗಳು ಮುಗಿಯದೇ ಇರುವುದಕ್ಕೆ ಕೆಡಿಪಿ ಹಾಗೂ ಇನ್ನಿತರೇ ಸಭೆಗಳಲ್ಲಿ ಚರ್ಚೆಯಾಗುತ್ತಿದೆ. ನಿರಂತರ ಅನುಸರಣೆ ಮಾಡಿ ವಾರದಲ್ಲಿ ನಿರಂತರವಾಗಿ ಕೆಲಸ ಮಾಡಿ ಜೆಜೆಎಮ್ ಕಾಮಗಾರಿ ಪೂರ್ಣಗೊಳಿಸುವಂತೆ ಸಹಾಯಕ ಅಭಿಯಂತರರಿಗೆ ಇದೆ ವೇಳೆ ಸಿಇಓ ಅವರು ಗಡುವು ವಿದಿಸಿದರು.

ಜೆಜೆಎಮ್ ಕಾಮಗಾರಿ ಸ್ಥಳದಲ್ಲಿ ಅಥವಾ ರೋಡ್ ಕಟ್ಟಿಂಗ್ ಮಾಡಿದ ಸ್ಥಳದಲ್ಲಿ ವಾರದೊಳಗೆ ಗುಣಮಟ್ಟದ ರಸ್ತೆ ನಿರ್ಮಿಸಿ ಸರಿಯಾಗಿ ಕೆಲಸ ಮಾಡಬೇಕು. ನೀರಿನ ಪ್ರಮಾಣ ಸರಿಯಾಗಿ ಪರಿಶೀಲಿಸಿ ಮನೆಗಳಿಗೆ ನೀರು ಸರಾಗವಾಗಿ ಹೋಗುವಂತಾಗಬೇಕು ಎಂದು ಇದೆ ವೇಳೆ ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಜೆಇ ಹಾಗೂ ಏಜೆನ್ಸಿಯವರಿಗೆ ಸೂಚನೆ ನೀಡಿದ ಸಿಇಓ ಅವರು, ಜೆಜೆಎಂ ಕಾಮಗಾರಿಯನ್ನು ಗಂಭೀರವಾಗಿ ಪರಿಗಣಿಸಿ ನಿಗದಿತ ಸಮಯದಲ್ಲಿ ಪೂರ್ಣಗೊಳಿಸಬೇಕೆಂದು ತಾಕೀತು ಮಾಡಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ, ಕಾರ್ಯನಿರ್ವಾಹಕ ಅಭಿಯಂತರರು, ಸಹಾಯಕ ನಿರ್ದೇಶಕರು, ಸಹಾಯಕ ಅಭಿಯಂತರರು, ಗ್ರಾ.ಪಂ ಅಧ್ಯಕ್ಷರು, ಸದಸ್ಯರು, ಪಿಡಿಓ, ಐಇಸಿ ಸಂಯೋಜಕರು ಹಾಗೂ ಗ್ರಾ.ಪಂ ಸಿಬ್ಬಂದಿ ಹಾಜರಿದ್ದರು.

## ಯುವಕನ ಕಿರುಕುಳ: ನೀರಿಗೆ ಜಿಗಿದು ಯುವತಿ ಆತ್ಮಹತ್ಯೆ

**ಕಲಬುರಗಿ,ಜು.22**–ಯುವಕನೊಬ್ಬ ನಿರಂತರ ಮಾನಸಿಕ ಹಿಂಸೆ ನೀಡುತ್ತಿದ್ದಾನೆ ಎಂದು ಬೇಸರಗೊಂಡು ಯುವತಿಯೊಬ್ಬಳು ಬೆಣ್ಣೆತೊರಾ ಡ್ಯಾಂ ಹಿನ್ನೀರಿಗೆ ಜಿಗಿದು ಆತ್ಮಹತ್ಯೆ ಮಾಡಿಕೊಂಡ ಘಟನೆ ಕಮಲಾಪುರ ತಾಲೂಕಿನ ಕುರಿಕೋಟ ಗ್ರಾಮದ ಬಳಿ ಸಂಭವಿಸಿದೆ.

ಸಾಕ್ಷಿ ತಂದೆ ಮನೋಜ್ ಉಪ್ಪಾರ್ (22) ಆತ್ಮಹತ್ಯೆ ಮಾಡಿಕೊಂಡಿರುವ ಯುವತಿ ಎಂದು ಪೊಲೀಸರು ತಿಳಿಸಿದ್ದಾರೆ. ಈಕೆಗೆ ಮಾನಸಿಕ ಹಿಂಸೆ ನೀಡುತ್ತಿದ್ದ ಯುವಕ ಪ್ರಸ್ತುತ ದುಬೈನಲ್ಲಿ ಇದ್ದಾನೆ ಎಂದು ಹೇಳಲಾಗಿದೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H